# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 83 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 15–10–2024 ಮಂಗಳವಾರ | ಪುಟ: 4 | ಬೆಲೆ : ರೂ.2–00

Volume - 02 Issue - 83 | RNI No: KARKAN/2023/88462 | Chitradurga | Date: 15-10-2024 Tuesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಡಿ.6ರೊಳಗೆ ಕಾಂತರಾಜ್ ವರದಿ ಜಾರಿಗೆ ತನ್ನಿ: ಸರ್ಕಾರಕ್ಕೆ ಮುನಿಯಪ್ಪ ಡೆಡ್‌ಲೈನ್ 2

ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಅ.16 ರಂದು ಬೃಹತ್ ಪ್ರತಿಭಟನೆ 3

ಗೌರಸಮುದ್ರ ಗ್ರಾಮದ ಬಾರನ್ನು ಬಂದ್ ಮಾಡಿ ಪ್ರತಿಭಟನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಕನ್ನಡ ಪ್ರಾಧಿಕಾರದ ಅಧ್ಯಕ್ಷರ ಜಿಲ್ಲಾ ಪ್ರವಾಸ

» ದಾವಣಗೆರೆ

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಅವರು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಅಕ್ಟೋಬರ್ 15 ರಂದು ಬೆಳಿಗ್ಗೆ 10.30ಕ್ಕೆ ದಾವಣಗೆರೆ ಆಗಮಿಸಿ, ವಿದ್ಯಾನಗರದಲ್ಲಿರುವ ಕುವೆಂಪು ಕನ್ನಡ ಭವನದಲ್ಲಿ ನಡೆಯುವ ಹರಿಹರದ ಕವಿ. ಜೆ.ಕಲೀಮ್ ಭಾಷ ಇವರ ಹಿಂದಿ ಭಾಷೆಯಿಂದ ಕನ್ನಡಕ್ಕೆ ಅನುವಾದಿತ ಕೃತಿ ಕ್ರಾಂತಿಕಾರಿ ಸ್ವಾತಂತ್ರ್ಯ ಹುತಾತ್ಮ ಕವಿ ರಾಮ್‌ಪ್ರಸಾದ್ ಬಿಸ್ಮಿಲ್ (ಆತ್ಮಕಥೆ) ಕೃತಿ ಲೋಕಾರ್ಪಣೆ ಸಮಾರಂಭದಲ್ಲಿ ಭಾಗವಹಿಸುವರು.

### ಅಕ್ಟೋಬರ್ 20 ರಂದು ಬೃಹತ್ ಉದ್ಯೋಗ ಮೇಳ

» ದಾವಣಗೆರೆ

ಎನ್‌ಐಇಎಲ್‌ಟಿ ಮತ್ತು ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ಸಹಕಾರದೊಂದಿಗೆ ಅಕ್ಟೋಬರ್ 20 ರಂದು ಬೆಂಗಳೂರು ನಗರ ಜಿಲ್ಲೆಯ ಕೆಎಲ್‌ಎಫ್ ಸಂಸ್ಥೆಯ ಎಸ್.ನಿಜಲಿಂಗಪ್ಪ ಮಹಾವಿದ್ಯಾಲಯ, #1040, 28ನೇ ಕ್ರಾಸ್ ರಸ್ತೆ, 2ನೇ ಬ್ಲಾಕ್, ರಾಜಾಜಿನಗರ ಬೆಂಗಳೂರು ಇಲ್ಲಿ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಈ ಉದ್ಯೋಗ ಮೇಳಕ್ಕೆ ರಾಜ್ಯದ ವಿವಿಧ ಭಾಗಗಳಿಂದ ಸುಮಾರು 100ಕ್ಕೂ ಹೆಚ್ಚಿನ ಪ್ರತಿಷ್ಠಿತ ಬೃಹತ್ ಮಧ್ಯಮ ಹಾಗೂ ಸಣ್ಣ ಉದ್ಯೋಗಧಾತರ ಸಂಸ್ಥೆಗಳು ಭಾಗವಹಿಸಲಿವೆ. ಆಸಕ್ತ ಅಭ್ಯರ್ಥಿಗಳು http://jobfair.callcut.nielit.in/ ಆನ್‌ಲೈನ್ ಮೂಲಕ ಅಥವಾ ಕ್ಯೂ.ಆರ್.ಕೋಡ್ ಸ್ಕ್ಯಾನ್ ಮಾಡಿ ಉಚಿತವಾಗಿ ನೋಂದಣಿ ಮಾಡಿಕೊಳ್ಳಬಹುದು.

### ಅ.16 ರಂದು ಜಿಲ್ಲಾ ಸಮನ್ವಯ ಸಮಿತಿ ಸಭೆ

» ದಾವಣಗೆರೆ

ನಾಗರಿಕ ನೋಂದಣಿ ಪದ್ಧತಿಯಡಿಯಲ್ಲಿ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಜನನ–ಮರಣಗಳ ನೋಂದಣಾಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ಅಕ್ಟೋಬರ್ 16 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಅಪರ ಜಿಲ್ಲಾ ಜನನ–ಮರಣಗಳ ನೋಂದಣಾಧಿಕಾರಿಗಳು ಹಾಗೂ ಜಿಲ್ಲಾ ಸಮನ್ವಯ ಸಮಿತಿ ಸದಸ್ಯ ಕಾರ್ಯದರ್ಶಿ ಲೀನಾ ತಿಳಿಸಿದ್ದಾರೆ.

### ವೃದ್ಧ ಕಾಣೆ

» ದಾವಣಗೆರೆ

ಬಸವನಗರ ಪೊಲೀಸ್ ಠಾಣೆಯ ವ್ಯಾಪ್ತಿಯ ದಾವಣಗೆರೆ ನಗರದ ಶಿವಾನಂದಪ್ಪ ಬಿನ್ ಸಂಗನಬಸಪ್ಪ 82 ವರ್ಷ, ಇವರು ಸುಮಾರು 2 ತಿಂಗಳಿನಿಂದ ಕಾಣೆಯಾಗಿರುತ್ತಾರೆ. ಎತ್ತರ 5.6 ಅಡಿ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ದುಂಡು ಮುಖ ಹೊಂದಿರುತ್ತಾರೆ, ಎಡಗೈ ಮೇಲೆ ಸುಟ್ಟ ಗಾಯದ ಕಲೆ ಇದೆ. ಹೋಗುವಾಗ ಬಿಳಿ ಬಣ್ಣದ ಷರ್ಟ್ ಹಾಗೂ ಪೈಜಾಮ ಧರಿಸಿರುತ್ತಾರೆ ಹೆಚ್ಚಿನ ಮಾಹಿತಿಗಾಗಿ ಮೊ.ಸಂ:9480803246, 08192–272009ಗೆ ಕರೆ ಮಾಡಿ ತಿಳಿಸಬಹುದೆಂದು ಬಸವನಗರ ಪೊಲೀಸ್ ಠಾಣೆಯ ಠಾಣಾಧಿಕಾರಿ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಮಾಯಕೊಂಡ ಮತ್ತು ಆನಗೋಡು ಮಾರ್ಗಗಳ ತ್ರೈಮಾಸಿಕ ನಿರ್ವಹಣೆ ಮತ್ತು ತುರ್ತು ಕಾಮಗಾರಿ ಇರುವುದರಿಂದ ಅಕ್ಟೋಬರ್ 15 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಅತ್ತಿಗೆರೆ ಫೀಡರ್ ವ್ಯಾಪ್ತಿಯ ಅತ್ತಿಗೆರೆ, ಕುರ್ಕಿ, ಬಾಡ, ಕಣ್ಣೂರು, ಹಿರೆತೂಗಲೇರಿ, ಗೋಪಾನಾಳು, ಕಂಬೈಲ್. ರಾಮಗೊಂಡನಹಳ್ಳಿ, ಕಾಶೀಪುರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಆನಗೋಡು ಫೀಡರ್ ವ್ಯಾಪ್ತಿಯ ಹಮಮನಹಳ್ಳಿ, ಕೊಗ್ಗನೂರು, ಹನುಮನಹಳ್ಳಿ, ಆನೆಗೋಡು, ಹೆಬ್ಬಾಳು, ನೀರ್ಥಡಿ, ಶಿವಪುರ, ಹಾಲುವರ್ತಿ, ಗಂಗನಕಟ್ಟೆ, ನೇರ್ಲಿಗಿ, ಚಿನ್ನಸಮುದ್ರ ಗ್ರಾಮಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳು ಮತ್ತು ಆರಾಧ್ಯಾ ಕೈಗಾರಿಕೆ ಮಾಯಕೊಂಡ ಫೀಡರ್ ವ್ಯಾಪ್ತಿಯ ಎಲ್ಲಾ 11 ಕೆವಿ ವಿದ್ಯುತ್ ಮಾರ್ಗಗಳಿಂದ, ಮಾಯಕೊಂಡ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

### ಕೆ.ಡಿ.ಪಿ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ

# ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ ಕ್ರಮ

» ಚಿತ್ರದುರ್ಗ

ಪ್ರಸಕ್ತ ವರ್ಷ ಎಸ್‌ಎಸ್‌ಎಲ್‌ಸಿ ಫಲಿತಾಂಶವನ್ನು ಸುಧಾರಿಸಲು ಅಗತ್ಯ ಎಲ್ಲ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿ.ಪಂ. ಸಭಾಂಗಣದಲ್ಲಿ ಸೋಮವಾರ ಜರುಗಿದ ತ್ರೈಮಾಸಿಕ ಕೆಡಿಪಿ ಹಾಗೂ 20 ಅಂಶಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮವಹಿಸಬೇಕು. ಈ ಹಿನ್ನಲೆಯಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಹಾಗೂ ಶಾಲೆಯ ಮುಖ್ಯ ಶಿಕ್ಷಕರಿಗೆ ಜವಾಬ್ದಾರಿ ಗೊತ್ತುಪಡಿಸುವಂತೆ ಸಚಿವ ಡಿ.ಸುಧಾಕರ್ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ಅವರಿಗೆ ಸೂಚನೆ ನೀಡಿದರು.

ಈ ಬಾರಿ ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮ ಸುಧಾರಣೆಗಾಗಿ ಅಗತ್ಯ ಕ್ರಮ ವಹಿಸಲಾಗಿದೆ. ಪ್ರತಿ ಶಾಲೆಯಲ್ಲಿಯೂ ವಿದ್ಯಾರ್ಥಿಗಳಿಗೆ ವಿಶೇಷ ತರಗತಿ, ಗುಂಪು ಅಧ್ಯಯನ, ಘಟಕ ಪರೀಕ್ಷೆ, ವೇಕಾಪ್ ಕಾಲ್ ಸೇರಿದಂತೆ ಶಿಕ್ಷಕರಿಗೆ ಪುನಶ್ಚೇತನ ತರಬೇತಿ ಕಾರ್ಯಾಗಾರಗಳ ನಡೆಸಲಾಗುತ್ತಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ಸಭೆಗೆ ಮಾಹಿತಿ ನೀಡಿದರು. ಪ್ರತಿಕ್ರಿಯಿಸಿದ ಸಚಿವರು ಎಸ್‌ಎಸ್‌ಎಲ್‌ಸಿ ಫಲಿತಾಂಶದ ಗುಣಮಟ್ಟ ಹೆಚ್ಚಬೇಕು, ರಾಜ್ಯ ಮಟ್ಟದಲ್ಲಿ ಉನ್ನತ ಸ್ಥಾನ ಪಡೆಯುವ ನಿಟ್ಟಿನಲ್ಲಿ ಅಧಿಕಾರಿಗಳು ವಿಷಯವಾರು ಯೋಜನೆಗಳನ್ನು ರೂಪಿಸಿ, ಉತ್ತಮ ಫಲಿತಾಂಶ ತರಬೇಕು ಎಂದು ತಾಕೀತು ಮಾಡಿದರು.

**ವಸತಿ ಶಾಲೆಗಳ ಅವ್ಯವಸ್ಥೆಗೆ ಅಸಮಧಾನ:** ಕ್ರೈಸ್ (ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ) ವತಿಯಿಂದ ಜಿಲ್ಲೆಯಲ್ಲಿ ನಡೆಸುತ್ತಿರುವ ವಸತಿ ಶಾಲೆಗಳ ನಿರ್ವಹಣೆ ಸರಿಯಿಲ್ಲ. ವಿದ್ಯಾರ್ಥಿಗಳಿಗೆ ಬಿಸಿ ನೀರು ಸಿಗುತ್ತಿಲ್ಲ. ಹಿರಿಯೂರು, ಮೊಳಕಾಲ್ಮೂರು ತಾಲ್ಲೂಕಿನ ವಸತಿ ಶಾಲೆಗಳಿಗೆ ಖುದ್ದು ಭೇಟಿ ನೀಡಿದ್ದೇನೆ. ಈ ಶಾಲೆಗಳು ಅವ್ಯವಸ್ಥೆಗಳ ಆಗರವಾಗಿವೆ. ವಿದ್ಯಾರ್ಥಿಗಳು ನೇರವಾಗಿ ನನಗೆ ಕರೆ ಮಾಡಿ ದೂರು ಹೇಳುತ್ತಾರೆ. ಈ ವಸತಿ ಶಾಲೆಗಳಿಗೆ ಸಂಬಂಧ ಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳು ಎಂದಾದರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದೀರಾ? ಎಂದು ಪ್ರಶ್ನಿಸಿ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸಭೆಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ನೂರಾರು ಕೋಟಿ ಖರ್ಚು ಮಾಡಿ ಕಟ್ಟಡಗಳನ್ನು ನಿರ್ಮಾಣ ಮಾಡಿ, ಉತ್ತಮ ಮೂಲಭೂತ ಸೌಕರ್ಯಗಳನ್ನು ವಸತಿ ಶಾಲೆಗಳಿಗೆ ಸರ್ಕಾರ ನೀಡಿದೆ. ಆದರೆ ನಿರ್ವಹಣೆ ಮಾಡುವಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ತೋರುವುದು ಸರಿಯಲ್ಲ ಎಂದು ಸಚಿವ ಡಿ.ಸುಧಾಕರ್ ಹೇಳಿದರು.

ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟವರ್ಗಗಳ ಇಲಾಖೆ ಸೇರಿದ ತಲಾ 16, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆ ತಲಾ 4 ವಸತಿ ಶಾಲೆಗಳು ಜಿಲ್ಲೆಯಲ್ಲಿವೆ. ಈ ಎಲ್ಲಾ ಶಾಲೆಗಳಲ್ಲಿ ಆರನೇ ತರಗತಿ ಪ್ರವೇಶಕ್ಕೆ 1670 ಸೀಟುಗಳು ಮಂಜೂರಾಗಿವೆ. ಪ್ರಸಕ್ತ ಸಾಲಿಗೆ ವಸತಿ ಶಾಲೆಗಳ ಪ್ರವೇಶಕ್ಕೆ 6500 ಅರ್ಜಿಗಳು ಬಂದಿದ್ದು, ಇದರಲ್ಲಿ 1760 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿ ಪ್ರವೇಶ ನೀಡಲಾಗಿದೆ. ವಸತಿ ಶಾಲೆಗಳಲ್ಲಿ ಗುಣಮಟ್ಟದ ಆಹಾರ ನೀಡಲಾಗುತ್ತಿದೆ. ವಸತಿ ಶಾಲೆಗಳಿಗೆ ಭೇಟಿ ನೀಡಿ ಸಮಸ್ಯೆ ಪರಿಹರಿಸುವುದಾಗಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಸಭೆಯಲ್ಲಿ ತಿಳಿಸಿದರು.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ ಹಿರಿಯೂರು ತಾಲ್ಲೂಕಿಗೆ ಮಂಜೂರಾಗಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಹಿರಿಯೂರು ತಾಲ್ಲೂಕು ಜೆ.ಜೆ.ಹಳ್ಳಿ ಹೋಬಳಿ ಆದಿವಾಲ ಗ್ರಾಮದ ಸರ್ವೆ ನಂ.77ರಲ್ಲಿ 5 ಎಕರೆ ನಿವೇಶನ ಗುರುತಿಸಿ, ಜಿಲ್ಲಾಧಿಕಾರಿಗಳಿಗೆ ಸ್ಥಳ ಮಂಜೂರಾತಿ ಪ್ರಸ್ತಾವನೆ ಸಲ್ಲಿಸಿರುವುದಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಕಾಂತರಾಜು ಸಭೆಯಲ್ಲಿ ಮಾಹಿತಿ ನೀಡಿದರು.

ಅಲೆಮಾರಿ ಮತ್ತು ಅರೆ ಅಲೆಮಾರಿ ಮಕ್ಕಳಿಗಾಗಿ 3 ವಸತಿ ಶಾಲೆಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಅನುಮೋದನೆ ನೀಡಿದೆ. ಇದರಲ್ಲಿ 1 ವಸತಿ ಶಾಲೆ ಹಿರಿಯೂರು ತಾಲ್ಲೂಕಿ ಮಂಜೂರಾಗಿದ್ದು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು ಈ ಕುರಿತು ಅಗತ್ಯ ಕ್ರಮಕೈಗೊಳ್ಳುವಂತೆ ವಿಧಾರ ಪರಿಷತ್ ಸದಸ್ಯ ಶ್ರೀನಿವಾಸ ಸಭೆಯಲ್ಲಿ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಜಿಲ್ಲಾ ಅಧ್ಯಕ್ಷ ಶಿವಣ್ಣ ಸೇರಿದಂತೆ ಕೆಡಿಪಿ ನಾಮನಿರ್ದೇಶಿತ ಸದಸ್ಯರು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಇದ್ದರು.





### ಅರಸನ ಕೆರೆ ತ್ಯಾಜ್ಯ ನೀರು ಶುದ್ಧೀಕರಣ ಘಟಕ ಸ್ಥಾಪನೆ

ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದಿಂದ ನಗರದ ಎಂ.ಕೆ.ಹಟ್ಟಿಯ ಅರಸನ ಕೆರೆ ಅಭಿವೃದ್ಧಿ ಯೋಜನೆ ರೂಪಿಸಲಾಗಿದೆ. ಕೆರೆಗೆ ನಗರದ ತ್ಯಾಜ್ಯ ನೀರು ಸೇರುತ್ತಿರುವುದರಿಂದ ಕೆರೆಯ ಆವಾಸ ಸ್ಥಾನ ಕಲುಷಿತಗೊಂಡಿದೆ. ಇದಕ್ಕೆ ಪರಿಹಾರವಾಗಿ ಕೆರೆಯ ಬಳಿ ತ್ಯಾಜ್ಯ ನೀರು ಶುದ್ಧೀಕರಣ ಘಟಕ ಸ್ಥಾಪಿಸಿ, ತ್ಯಾಜ್ಯ ನೀರು ಶುದ್ಧೀಕರಿಸಿ ಕೆರೆಗೆ ಹರಿಸುವಂತೆ ನಗರಸಭೆಗೆ ಶಿಫಾರಸ್ಸು ಮಾಡಲಾಗಿದೆ ಎಂದು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಇಂಜಿನಿಯರ್ ಸಭೆಯಲ್ಲಿ ಮಾಹಿತಿ ನೀಡಿದರು. ಮಲ್ಲಾಪುರ ಕೆರೆ ನೀರು ಸಹ ಕಲುಷಿತಗೊಂಡಿದೆ. ಅಧಿಕಾರಿಗಳು ತ್ಯಾಜ್ಯ ನೀರು ಶುದ್ಧೀಕರಣ ಘಟಕ ಕಾರ್ಯಾರಂಭ ಮಾಡಿ ನೀರು ಶುದ್ಧೀಕರಿಸಿ ಕೆರೆಗೆ ಬಿಡುವ ಕೆಲಸ ಮಾಡಬೇಕು ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಸಭೆಯಲ್ಲಿ ತಿಳಿಸಿದರು. ತಾತ್ಕಾಲಿಕವಾಗಿ ಮಲ್ಲಾಪುರ ಕೆರೆ ಬಳಿಯ ಶುದ್ಧೀಕರಣ ಘಟಕ ಸಂಪರ್ಕ ರಸ್ತೆ ಕಲ್ಪಿಸಿ ತ್ಯಾಜ್ಯ ನೀರನ್ನು ಶುದ್ಧೀಕರಿಸಿ ಕೆರೆ ಸ್ವಚ್ಛಗೊಳಿಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಿರುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹೇಳಿದರು.

### ಹೊರ ಜಿಲ್ಲಾ ಆಸ್ಪತ್ರೆಗಳಿಗೆ ರೋಗಿಗಳ ಶಿಫಾರಸ್ಸಿಗೆ ತಡೆಗೆ ಸೂಚನೆ

ಸರ್ಕಾರ ಕೋಟ್ಯಾಂತರ ರೂ.ಗಳನ್ನು ಸರ್ಕಾರಿ ಆಸ್ಪತ್ರೆಗಾಗಿ ಖರ್ಚು ಮಾಡುತ್ತಿದೆ. ಆದರೆ, ಇಲ್ಲಿ ಬಡವರಿಗೆ ಸರಿಯಾದ ಚಿಕಿತ್ಸೆಯೇ ಸಿಗುವುದಿಲ್ಲ ಎಂದರೆ ಹೇಗೆ?. ಮೊಳಕಾಲ್ಮೂರಿನಿಂದ ಸಾಕಷ್ಟು ರೋಗಿಗಳು ಬಳ್ಳಾರಿಗೆ ಹೋಗುತ್ತಿದ್ದಾರೆ ಎಂದು ಸಚಿವ ಸುಧಾಕರ್ ಕೂಡಾ ಅಸಮಾಧಾನ ವ್ಯಕ್ತಪಡಿಸಿದರು. ಹೊರ ಜಿಲ್ಲಾ ಆಸ್ಪತ್ರೆಗಳಿಗೆ ರೋಗಿಗಳ ಶಿಫಾರಸ್ಸು ಮಾಡುವುದನ್ನು ತಡೆಯಲು ಸಚಿವ ಡಿ.ಸುಧಾಕರ್ ಸೂಚನೆ ನೀಡಿದರು. ಜಿಲ್ಲೆಯ ಎಲ್ಲ ತಾಲೂಕು ಆಸ್ಪತ್ರೆಗಳು ಹಾಗೂ ಜಿಲ್ಲಾ ಆಸ್ಪತ್ರೆಯಿಂದ ಸಣ್ಣಪುಟ್ಟ ಕಾಯಿಲೆಗೆ ಹೋದ ರೋಗಿಗಳಿಗೆ ಸರಿಯಾಗಿ ಚಿಕಿತ್ಸೆ ಕೊಡದೇ ಬಸವೇಶ್ವರ ಆಸ್ಪತ್ರೆ, ಮಣಿಪಾಲ, ದಾವಣಗೆರೆ, ಮಂಗಳೂರು, ಬೆಂಗಳೂರು ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡುವ ಪ್ರವೃತ್ತಿ ಹೆಚ್ಚಾಗುತ್ತಿದೆ. ಆಸ್ಪತ್ರೆಗಳಿಗೆ ಬರುವ ಬಹುತೇಕ ರೋಗಿಗಳು ಬಡವರೇ ಆಗಿರುತ್ತಾರೆ. ಅವರ ಬಳಿ ಹಣ ಇರುವುದಿಲ್ಲ. ಅವರನ್ನು ಮಂಗಳೂರು, ಬೆಂಗಳೂರಿಗೆ ಶಿಫಾರಸ್ಸು ಮಾಡದಂತೆ ಶಾಸಕ ಎಂ.ಚಂದ್ರಪ್ಪ ಜಿಲ್ಲಾ ಆರೋಗ್ಯಾಧಿಕಾರಿ ಹಾಗೂ ಜಿಲ್ಲಾ ಶಸ್ತ್ರಚಿಕಿತ್ಸಕರಿಗೆ ತಿಳಿಸಿದರು. ಮುಂದಿನ ಕೆಡಿಪಿ ಸಭೆಯಲ್ಲಿ ಕೋವಿಡ್ ವೇಳೆ ಚಿತ್ರದುರ್ಗ ಜಿಲ್ಲೆಯ ಎಲ್ಲ ಆಸ್ಪತ್ರೆಗಳಿಗೆ ಸರ್ಕಾರದಿಂದ ಎಷ್ಟು ಅನುದಾನ ಬಂದಿತ್ತು, ಎಷ್ಟು ಖರ್ಚಾಗಿದೆ. ಆಗ ಖರೀಧಿಸಿದ ವಸ್ತುಗಳು ಎಲ್ಲಿವೆ, ಸಿಎಸ್‌ಆರ್ ನಿಧಿ ಎಷ್ಟು ಬಂದಿತ್ತು ಎಲ್ಲ ವಿವರಗಳನ್ನು ಸಲ್ಲಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸಚಿವ ಡಿ.ಸುಧಾಕರ್ ಹಾಗೂ ಶಾಸಕ ಚಂದ್ರಪ್ಪ ಸೂಚಿಸಿದರು.

### ಬಿ.ಡಿ.ರಸ್ತೆಯಲ್ಲಿ ವಾಹನ ಪಾರ್ಕಿಂಗ್ ಬೇಡ

ಚಿತ್ರದುರ್ಗ ಜಿಲ್ಲಾ ಕೇಂದ್ರದ ಮುಖ್ಯರಸ್ತೆಯಲ್ಲಿ ಫುಟ್‌ಪಾತ್ ಇಲ್ಲ. ಡಿವೈಡರ್ ಹಾಕಲಾಗಿದೆ. ಎತ್ತಿನ ಗಾಡಿ ಬಂದರೂ ಪಕ್ಕದಲ್ಲಿ ದಾರಿ ಇರುವುದಿಲ್ಲ. ಬಿ.ಡಿ.ರಸ್ತೆಯುದ್ದಕ್ಕೂ ವಾಹನಗಳನ್ನು ನಿಲ್ಲಿಸಲಾಗಿರುತ್ತದೆ. ಈ ರಸ್ತೆಯಲ್ಲಿ ವಾಹನ ನಿಲ್ಲಿಸುವುದು ಬೇಡ. ಹಳೇ ಮಾಧ್ಯಮಿಕ ಶಾಲಾ ಆವರಣ ಅಥವಾ ಬೇರೆ ಎಲ್ಲಾದರೂ ಜಾಗ ನಿಗಧಿ ಮಾಡಿ ಎಂದು ಕೆಡಿಪಿ ಸಭೆಯಲ್ಲಿ ಅಭಿಪ್ರಾಯ ಕೇಳಿ ಬಂತು. ಪ್ರತಿಕ್ರಿಯಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್‌ಕುಮಾರ್ ಬಂಡಾರು, ಸದ್ಯದಲ್ಲೇ ಈ ಬಗ್ಗೆ ನೋಟಿಫಿಕೇಶನ್ ಹೊರಡಿಸಿ ಪಾರ್ಕಿಂಗ್ ಸ್ಥಳ ಬದಲಾಯಿಸುತ್ತೇವೆ ಎಂದು ತಿಳಿಸಿದರು.

### ಗಾಂಧಿ ವೃತ್ತದ ಜನತಾ ಬಜಾರ್ ಜಾಗದಲ್ಲಿ ಪಾರ್ಕಿಂಗ್ ಮಾಡಿಸಿ

ಶಾಸಕ ಎಂ.ಚಂದ್ರಪ್ಪ, ನಗರದ ಮಧ್ಯ ಭಾಗದಲ್ಲಿರುವ ಗಾಂಧಿ ವೃತ್ತದಲ್ಲಿರುವ ಖಾಲಿ ಜಾಗದಲ್ಲಿ ಪಾರ್ಕಿಂಗ್ ಮಾಡಲು ವ್ಯವಸ್ಥೆ ಮಾಡಿ. ಒಳ್ಳೆಯ ಡಿಸೈನರ್ ಕರೆಯಿಸಿ ಸುಮಾರು ಒಂದು ಸಾವಿರ ವಾಹನಗಳನ್ನು ನಿಲ್ಲಿಸುವಷ್ಟು ಕಟ್ಟಡ ಮಾಡಿ, ಹಣ ಪಡೆದು ಪಾರ್ಕಿಂಗ್ ಮಾಡಲು ಅವಕಾಶ ಕಲ್ಪಿಸಿ ಎಂದು ಶಾಸಕ ಎಂ.ಚಂದ್ರಪ್ಪ ಸಲಹೆ ನೀಡಿದರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಮಾತನಾಡಿ, ಕಳೆದ ಸಭೆಯಲ್ಲಿಯೇ ಒತ್ತುವರಿ ತೆರವು ಮಾಡಿ, ರಸ್ತೆ ಅಗಲೀಕರಣ ಮಾಡಲು ಸೂಚಿಸಲಾಗಿತ್ತು. ಆದರೆ, ಈವರೆಗೆ ಜೆಸಿಆರ್‌ನಲ್ಲಿ ಡಿವೈಡರ್ ಮಾತ್ರ ಒಡೆಯಲಾಗಿದೆ ಎಂದು ಅಧಿಕಾರಿಗಳ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. ಚಳ್ಳಕೆರೆ ಗೇಟ್‌ನಲ್ಲಿ ವೃತ್ತ ನಿರ್ಮಾಣ ಆಸ್ಪತ್ರೆ ಮುಂಭಾಗದ ತುರುವನೂರು ರಸ್ತೆಯಲ್ಲೂ ಡಿವೈಡರ್ ತೆಗೆದು ಸಂಚಾರಕ್ಕೆ ಅವಕಾಶ ಮಾಡಿಕೊಡುವಂತೆ ಸೂಚಿಸಿದರು. ನ್ಯಾಯಾಲಯದಲ್ಲಿ ತಡೆಯಾಜ್ಞೆ ಇಲ್ಲದ ಕಟ್ಟಡಗಳನ್ನು ತೆರವು ಮಾಡಿ. ಗಾಂಧಿ ವೃತ್ತದಲ್ಲಿ ರಸ್ತೆಗೆ ಇರುವ ಕಟ್ಟಡ ತೆರವು ಮಾಡಿ ಎಂದು ನಗರಸಭೆ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಹಿರೇಗುಂಟನೂರು ದಿಂಡದಹಳ್ಳಿ ಸರ್ವೆ.ನಂ 35 ಮತ್ತು 38 ರಲ್ಲಿ ದಾಸ್ತಾನು ಮಾಡಲಾಗಿರುವ ಕಬ್ಬಿಣದ ಅದಿರಿನ ಮೌಲ್ಯ ಹೆಚ್ಚಾಗಿದ್ದು, ಇದನ್ನು ಕಡಿಮೆ ಗುಣಮಟ್ಟದ ಅದಿರು ಎಂದು ಭಾವಿಸಿ, ಖಾಸಗಿ ಕಂಪನಿಗಳಿಗೆ ನೀಡಲಾಗಿದೆ. ಇದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿದೆ. ಈ ಕುರಿತು ಜಿಲ್ಲಾಧಿಕಾರಿಗಳು ಸಮಗ್ರ ಮಾಹಿತಿ ಪಡೆದು, ಅದಿರು ಮಾರಾಟದ ವಹಿವಾಟನ್ನು ರದ್ದು ಪಡಿಸಲು ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಸೂಚನೆ ನೀಡಿದರು.

## ಪ್ರಮುಖ ಸುದ್ದಿ

### ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವ ಹಾಗೂ ಶರಣ ಸಂಸ್ಕೃತಿ ಉತ್ಸವ –2024

# ಸಾಮಾನ್ಯರನ್ನು ಶರಣರನ್ನಾಗಿ ಮಾಡುವ ಶಕ್ತಿ ಶ್ರೀಮಠಕ್ಕಿದೆ

» ಚಿತ್ರದುರ್ಗ

ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವ ಹಾಗೂ ಶರಣ ಸಂಸ್ಕೃತಿ ಉತ್ಸವ –2024 ನಿಮಿತ್ತ ದಿನಾಂಕ:13.10.2024ರಂದು ಸಾಂಸ್ಕೃತಿಕ ಸಮಾರಂಭವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಬಹುಜನ ಸಮಾಜ ಪಕ್ಷದ ರಾಜ್ಯಾಧ್ಯಕ್ಷರಾದ ಶ್ರೀ ಮಾರಸಂದ್ರ ಮುನಿಯಪ್ಪ ಮಾತನಾಡಿ, ಶ್ರೀಮಠ ಎಲ್ಲಾ ಸಮುದಾಯದ ಜನರನ್ನು ಒಟ್ಟಿಗೆ ಕರೆದುಕೊಂಡು ಹೋಗುವಂತಹದ್ದು. ಮುರುಘಾ ಮಠ ಎಂದರೆ ಬಸವ ಪರಂಪರೆಯ ಮಠವಾಗಿದೆ. ಈ ದೇಶದಲ್ಲಿ ಶತಮಾನಗಳಿಂದಲೂ ಕೆಳಸ್ತರದ ಜನರು ಶೋಷಣೆಗೆ ಒಳಗಾಗುತ್ತಾ ಬಂದಿದ್ದಾರೆ.




ಇದರ ವಿರುದ್ಧವಾಗಿ ಮೊದಲು ಧ್ವನಿ ಎತ್ತಿದವರು ಬುದ್ಧನಾದರೆ, ಹನ್ನೆರಡನೇ ಶತಮಾನದಲ್ಲಿ ಶೋಷಿತರ ಪರ ಧ್ವನಿ ಎತ್ತಿದವರು ಬಸವಣ್ಣ ಹಾಗೂ ಶಿವಶರಣರಾಗಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಡಿ ಟಿ ಅರುಣ್ ಕುಮಾರ್ ಮಾತನಾಡಿ, ಶ್ರೀಮಠವು ರಾಜ್ಯ, ರಾಷ್ಟ್ರಮಟ್ಟದಲ್ಲಿ ತನ್ನದೇ ಆದ ಇತಿಹಾಸ ಪಂಪರೆಯನ್ನು ಹೊಂದಿದೆ. ಶ್ರೀಮಠ ಬಸವಾದಿ ಶರಣರ ವಿಚಾರಗಳನ್ನು ನಾಡಿನಾದ್ಯಂತ ಪಸರಿಸುತ್ತಿದೆ. ಸಾಮಾನ್ಯರನ್ನು ಶರಣರನ್ನಾಗಿ ಮಾಡುವ ಶಕ್ತಿ ಶ್ರೀಮಠಕ್ಕಿದೆ. ಸಂಘಟನೆ ಬಗ್ಗೆ ಗೊತ್ತಿಲ್ಲದವರಿಗೆ ಶರಣ ಸಂಗಮ, ಬಸವತತ್ತ್ವದ ಮೂಲಕ ಜನರನ್ನು ಸಂಘಟಿಸುವಂತಹ ಕೆಲಸವನ್ನು ಶ್ರೀಮಠ ಮಾಡುತ್ತಾ ಬರುತ್ತಿದೆ. ಪ್ರಚಲಿತ ವಿದ್ಯಮಾನಗಳಲ್ಲಿ ವಿಜ್ಞಾನ ಹಾಗೂ ತಂತ್ರಜ್ಞಾನಕ್ಕೆ ಹೆಚ್ಚು ಮಹತ್ವವಿದೆ. ಆದರೆ ವೈಜ್ಞಾನಿಕವಾಗಿರುವಂತಹ ಬಸವಣ್ಣನವರ ವಿಚಾರಧಾರೆಗಳು ದೂರವಾಗುತ್ತಿರುವುದು ವಿಷಾದನೀಯ ಎಂದು ತಿಳಿಸಿದರು.


ಪುಟ 2

# ಡಿ.6ರೊಳಗೆ ಕಾಂತರಾಜ್ ವರದಿ ಜಾರಿಗೆ ತನ್ನಿ

» ಚಿತ್ರದುರ್ಗ



ಸುಪ್ರಿಂಕೋರ್ಟ್ ಆದೇಶದಂತೆ ಒಳಮೀಸಲಾತಿ ಜಾರಿ ಮತ್ತು ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಅಧ್ಯಯನ ಮಾಡಿರುವ ಕಾಂತರಾಜ್ ಆಯೋಗದ ವರದಿಯನ್ನು ಡಿಸೆಂಬರ್ 6, 2024ರ ಒಳಗೆ ಸರ್ಕಾರ ಜಾರಿ ಮಾಡದಿದ್ದರೆ ಆಲ್ ಇಂಡಿಯಾ ಬಹುಜನಸಮಾಜಪಾರ್ಟಿಯವತಿಯಿಂದ ರಾಜ್ಯದಾದ್ಯಂತ ಬೃಹತ್ ಹೋರಾಟವನ್ನು ಹಮ್ಮಿಕೊಳ್ಳಲಾಗುವುದೆಂದು ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿಯ ರಾಜ್ಯಾಧ್ಯಕ್ಷರಾದ ಮಾರಸಂದ್ರ ಮುನಿಯಪ್ಪ ಸರ್ಕಾರಕ್ಕೆ ಎಚ್ಚರಿಕೆಯನ್ನು ನೀಡಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 40–50 ವರ್ಷಗಳಿಂದ ಪರಿಶಿಷ್ಟ ಜಾತಿಯ ಪಟ್ಟಿಯನ್ನು ಅದರಲ್ಲಿನ ಜಾತಿಗಳ ಜನಸಂಖ್ಯೆಗೆ ಅನುಗುಣವಾಗಿ ವರ್ಗೀಕರಣ ಮಾಡಬೇಕೆಂದು ಒತ್ತಾಯಿಸಿ ಪಂಜಾಬ್, ಹರಿಯಾಣ, ತಮಿಳುನಾಡು, ಆಂಧ್ರಪ್ರದೇಶ ಮತ್ತು ಕರ್ನಾಟಕ ರಾಜ್ಯಗಳಲ್ಲ. ಅವಕಾಶವಂಚಿತ ಪರಿಶಿಷ್ಟ ಜಾತಿಗಳು ಹೋರಾಡುತ್ತಲೇ ಇವೆ. ಅನೇಕ ರಾಜ್ಯಗಳಲ್ಲಿ ಆಯಾ ಸರ್ಕಾರಗಳು ನೇಮಿಸಿದ್ದ ಆಯೋಗಗಳು ಆಯಾ ರಾಜ್ಯ ಸರ್ಕಾರಗಳಿಗೆ ವರದಿಗಳನ್ನು ಸಲ್ಲಿಸಿ, ವರ್ಗೀಕರಣಕ್ಕೆ ಶಿಫಾರಸು ಮಾಡಿವೆ. ಆದರೆ. .ವಿ.ಚಿನ್ನಯ್ಯ ಗ/ ಆಂಧ್ರಪ್ರದೇಶ ಸರ್ಕಾರ ಪ್ರಕರಣದಲ್ಲಿ, "ವರ್ಗೀಕರಣದಿಂದಾಗಿ ಸಂವಿಧಾನದ ಉಲ್ಲಂಘನೆಯಾಗುತ್ತದೆ" ಎಂದು ಸುಪ್ರಿಂಕೋರ್ಟ್ ತೀರ್ಪು ನೀಡಿದ ಪ್ರಯುಕ್ತ, ಈ ಶಿಫಾರಸುಗಳು ಜಾರಿಯಾಗಲಿಲ್ಲ. ಆದರೆ, ಆಗಸ್ಟ್ 1, 2024 ರಂದು ಏಳು ನ್ಯಾಯಧೀಶರ ಪೂರ್ಣಪೀಠವು "ಒಳಮೀಸಲಾತಿ ನೀತಿಯು ಸಂವಿಧಾನ ಬದ್ಧವಾಗಿದೆ" ಎಂದು ಹೇಳಿದ್ದಲ್ಲದೆ, ಎಸ್‌ಸಿ ಮೀಸಲಾತಿಯಲ್ಲಿ ವರ್ಗೀಕರಣ ಮಾಡಲು ರಾಜ್ಯ ಸರ್ಕಾರಗಳಿಗೆ ಅಧಿಕಾರವನ್ನೂ ನೀಡಿತು. ಈ ತೀರ್ಪಿನ ವಿರುದ್ಧ ಕೆಲವರು ಸಲ್ಲಿಸಿದ್ದ ಮರುಪರಿಶೀಲನಾ ಅರ್ಜಿಗಳನ್ನು 4.10.2024 ರಂದು ಸುಪ್ರಿಂಕೋರ್ಟ್ ವಜಾಮಾಡಿದೆ. ಅಂದರೆ, ಇಲ್ಲಿಯತನಕ ಇದ್ದಂತಹ ಎಲ್ಲಾ ಅಡೆತಡೆಗಳು ಇದೀಗ ನಿವಾರಣೆಯಾಗಿವೆ. ಈಗ ರಾಜ್ಯ ಸರ್ಕಾರಗಳುಯಾವುದೇಸಬೂಬುಹೇಳದೆ ಒಳಮೀಸಲಾತಿಯನ್ನು ಜಾರಿಗೆ ತರಲು ಕೂಡಲೇ ಕಾರ್ಯೋನ್ಮುಖವಾಗಬೇಕಿದೆ ಎಂದು ಒತ್ತಾಯಿಸಿದರು.

ಸುಪ್ರಿಂಕೋರ್ಟ್ ನ್ಯಾಯಾಧೀಶರುಗಳು ಒಳಮೀಸಲಾತಿ ತೀರ್ಪಿನಲ್ಲಿ ಜಾತಿಗಳ ದತ್ತಾಂಶವನ್ನು ವೈಜ್ಞಾನಿಕ ರೀತಿಯಲ್ಲಿ ಸಂಗ್ರಹಿಸಿ. ವರ್ಗೀಕರಣವನ್ನು ಅನುಷ್ಠಾನಕ್ಕೆ ತರಬೇಕೆಂದು ಹೇಳಿದ್ದಾರೆ. ಇತರೆ ರಾಜ್ಯಗಳಲ್ಲಿ ಅಂತಹ ದತ್ತಾಂಶ ಸಂಗ್ರಹಣೆ ನಡೆದಿಲ್ಲದಿರಬಹುದು. ಆದರೆ ಕರ್ನಾಟಕದಲ್ಲಿ ಸದಾಶಿವ ಆಯೋಗ ಮತ್ತು 2015 ರಲ್ಲಿ ಕಾಂತರಾಜ ಆಯೋಗವು ಅತ್ಯಂತ ವೈಜ್ಞಾನಿಕವಾಗಿ ಎಲ್ಲಾ ಜಾತಿಗಳ ದತ್ತಾಂಶ ಸಂಗ್ರಹಿಸಿ ತನ್ನ ವರದಿಯನ್ನು ನೀಡಿದೆ. ಈ ವರದಿಯಲ್ಲಿ ಪ್ರತಿಯೊಂದು ಜಾತಿಯ/ಸಮುದಾಯದ ಸಾಮಾಜಿಕ ಮತ್ತು ಆರ್ಥಿಕ ವಿವರಗಳನ್ನು ನೀಡಲಾಗಿದೆ. ಮಾನ್ಯ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಯಾವುದೇ ಒತ್ತಡಕ್ಕೂ ಮಣಿಯದೆ, ಕಾಂತರಾಜ ಆಯೋಗದ ಈ ವರದಿಯನ್ನು ಅಂಗೀಕರಿಸಬೇಕೆಂದು ಆಗ್ರಹಿಸಲಾಯಿತು.

ನಾಲ್ವಡಿಕೃಷ್ಣರಾಜ ಒಡೆಯರ್ ಕಾಲದಲ್ಲಿ ನೇಮಿಸಲ್ಪಟ್ಟ ಮಿಲ್ಲರ್ ಆಯೋಗವು 1921ರಲ್ಲಿ ನೀಡಿದ ವರದಿಯ ಪ್ರಕಾರ ಬ್ರಾಹ್ಮಣೇತರ ಜಾತಿಗಳಿಗೆ 75% ಮೀಸಲಾತಿಯು ಜಾರಿಯಾಯಿತು. ಅಂದು ಆ ಮೀಸಲಾತಿಯ ಸಂಪೂರ್ಣ ಲಾಭ ಪಡೆದ ಒಕ್ಕಲಿಗ, ಅಂಗಾಯಿತ, ರೆಡ್ಡಿ, ನಾಯ್ಡುಗಳು ಇಂದು ಎಲ್ಲಾ ಕ್ಷೇತ್ರಗಳಲ್ಲೂ ಅಧಿಕ ಮತ್ತು ಅತ್ಯುನ್ನತ ಸ್ಥಾನಗಳನ್ನು ಆಕ್ರಮಿಸಿಕೊಂಡಿದ್ದಾರೆ. ಆದರೆ, ಆ ಮೀಸಲಾತಿಯ ಈ ಫಲಾನುಭವಿಗಳು ಇತರೆ ಹಿಂದುಳಿದ ವರ್ಗಗಳಿಗೆ, ಅಲ್ಪಸಂಖ್ಯಾತರಿಗೆ ಮತ್ತು ಎಸ್‌ಸಿ/ಎಸ್‌ಟಿಗಳಿಗೆ ಮೀಸಲಾತಿ ನೀಡುವುದನ್ನು ವಿರೋಧಿಸುತ್ತಿದ್ದಾರೆ ಮತ್ತು ಜಾತಿ ಜನಗಣತಿಯ ವರದಿಯನ್ನು ಅಂಗೀಕರಿಸದಿರಲು ಮುಖ್ಯಮಂತ್ರಿಗಳನ್ನು ಒತ್ತಾಯಿಸುತ್ತಿದ್ದಾರೆ. ಆದರೆ, ಅಹಿಂದ ವರ್ಗಗಳ ನಾಯಕರೆನಿಸಿಕೊಂಡಿರುವ ಸಿದ್ದರಾಮಯ್ಯನವರು ಈ ಪ್ರಬಲ ಜಾತಿಗಳ ಯಾವುದೇ ಒತ್ತಡಕ್ಕೂ ಮಣಿಯದೆ. ಈ ತಿಂಗಳೊಳಗೆ ವಿಶೇಷ ಅಧಿವೇಶನವನ್ನು ಕರೆದು ಕಾಂತರಾಜ್ ಆಯೋಗದ ವರದಿಯನ್ನು ವಿಧಾನಸಭೆಯಲ್ಲಿ ಮಂಡಿಸಿ ಅಂಗೀಕರಿಸಬೇಕು ಎಂದು ಮಾರಸಂದ್ರ ಮುನಿಯಪ್ಪ ಒತ್ತಾಯಿಸಿದ್ದಾರೆ.

ಒಳಮೀಸಲಾತಿಯನ್ನು ತಕ್ಷಣವೇ ಜಾರಿಗೆ ತರಲು ಕರ್ನಾಟಕ ರಾಜ್ಯದಲ್ಲಿ. ಅತ್ಯಂತ ಸೂಕ್ತವಾದ ವಾತಾವರಣವು ನಿರ್ಮಾಣವಾಗಿದೆ. ಒಳಮೀಸಲಾತಿಯ ತೀರ್ಪನ್ನು ಎಸ್‌ಸಿ ಪಟ್ಟಿಯೊಳಗಿನ ಎಲ್ಲಾ ಉಪಜಾತಿಗಳು ಸ್ವಾಗತಿಸಿವೆ. ಸಂವಿಧಾನ ಶಿಲ್ಪಿ ಬಾಬಾಸಾಹೇಬ್ ಅಂಬೇಡ್ಕರ್‌ರ 68ನೇ ಪರಿನಿಬ್ಬಾಣದ ದಿನವಾದ ಡಿಸೆಂಬರ್ 6, 2024ರೊಳಗೆ ಸುಪ್ರಿಂಕೋರ್ಟ್ ತೀರ್ಪನ್ನು ಜಾರಿಮಾಡಲು ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದ್ದಾರೆ.ಅಪ್ರಾಪ್ತ ಮುಗ್ಧ ಬಾಲಕಿಯರ ಮೇಲೆ ಲೈಂಗಿಕವಾಗಿ ದೌರ್ಜನ್ಯ ನಡೆಸಿರುವ ಈ ಬಗ್ಗೆ ಪೊಕ್ಸೋ ಅಂತಹ ಗಂಭೀರ ಸ್ವರೂಪದ ಆರೋಪಗಳನ್ನು ಎದುರಿಸುತ್ತಿರುವ ಮುರುಘ ರಾಜೇಂದ್ರ ಮಠದ ಶಿವಮೂರ್ತಿ ಶರಣರಿಗೆ ಜಾಮೀನು ಸಿಕ್ಕಿರುವುದು ದುರಾದೃಷ್ಟಕರ ಸಂಗತಿ. ಇವರು ಬಸವಣ್ಣನವರ ಅನುಯಾಯಿ ಆಗಲು ಅರ್ಹರಲ್ಲ. ಇವರು ಪ್ರಭಾವಿ ಆರೋಪಿಯಾಗಿದ್ದು, ಜಾಮೀನಿನ ಮೇಲೆ ಬಿಡುಗಡೆಯಾಗಿ ಹೊರಬಂದ ಮೇಲೆ ಇವರ ಅನೇಕ ಅಂಧಭಕ್ತರು ಇವರನ್ನು ಸ್ವಾಗತಿಸಿದ ಪರಿ ನೋಡಿದರೆ ಶಿವಮೂರ್ತಿ ಶರಣರು ಮತ್ತು ಇವರ ಅಂಧಭಕ್ತರು ಸಾಕ್ಷಿಗಳನ್ನುಬೆದರಿಸುವ,ಸಾಕ್ಷಾಧಾರಗಳನ್ನು ನಾಶಮಾಡುವ ಎಲ್ಲಾ ಸಾಧ್ಯತೆಗಳು ಇರುವುದರಿಂದ ಇವರ ಜಾಮೀನು ರದ್ದುಗೊಳಿಸಲು ಪಬ್ಲಿಕ್ ಪ್ರಾಸಿಕ್ಯೂಟರ್ ತುರ್ತು ಕ್ರಮ ಕೈಗೊಳ್ಳಬೇಕೆಂದು ಆಲ್ ಇಂಡಿಯಾ ಬಹುಜನ ಸಮಾಜ ಪಾರ್ಟಿ ಒತ್ತಾಯಿಸಿದೆ. ರಾಷ್ಟ್ರೀಯ ಸಂಯೋಜಕರು ಎಂ.ಗೋಪನಾಥ್, ರಾಜ್ಯ ಸಂಯೋಜಕರು ಆರ್. ಮುನಿಯಪ್ಪ ಸೇರಿದಂತೆ ಇತರರು ಗೋಷ್ಠಿಯಲ್ಲಿ ಭಾಗವಹಿಸಿದ್ದರು.

# ತಿಪ್ಪೇರುದ್ರಸ್ವಾಮಿ ದೇವಾಲಯದ ಪುಷ್ಕರಣಿ: 30 ವರ್ಷಗಳ ನಂತರ ಉಕ್ಕಿದ ಜಲ

» ನಮ್ಮ ಜನ ಸಮಾಚಾರ


ನಾಯಕನಹಟ್ಟಿ: ಬತ್ತಿಹೋಗಿದ್ದ ಇಲ್ಲಿನ ಶ್ರೀ ಗುರು ತಿಪ್ಪೇರುದ್ರಸ್ವಾಮಿ ದೇವಾಲಯದ ಪುಷ್ಕರಣಿಯಲ್ಲಿ 20 ಅಡಿ ಜಲ ಉಕ್ಕಿಬಂದಿದೆ.

30 ವರ್ಷಗಳ ನಂತರ ಹೊರಮಠದ ಆವರಣದಲ್ಲಿನ ಕಲ್ಯಾಣಿಗೆ ನೀರು ಬಂದಿದೆ. ತಿಪ್ಪೇರುದ್ರಸ್ವಾಮಿ ಹೊರಮಠದ ಆವರಣದ ಪುಷ್ಕರಣಿ 300 ವರ್ಷಗಳ ಹಿಂದೆ ನಿರ್ಮಾಣ ಗೊಂಡಿದ್ದು, ಇದರ ನೀರನ್ನು ನಿತ್ಯ ಪೂಜೆಗೆ ಬಳಸಲಾಗುತ್ತಿತ್ತು. ಮೋಟಾರ್ ಮೂಲಕ ಪಂಪ್ ಮಾಡಲಾಗುತ್ತಿತ್ತು.

30 ವರ್ಷ ಹಿಂದೆ ಜಾತ್ರೆ ವೇಳೆ ಪುಷ್ಕರಣಿ ಸುತ್ತ ಸಾವಿರಾರು ಭಕ್ತರು ತಂಗುತ್ತಿದ್ದರು. 30 ವರ್ಷಗಳ ಹಿಂದೆ ಪುಷ್ಕರಣಿಯ ಒಂದು ಭಾಗ ಕುಸಿದು, ದುರಂತದಲ್ಲಿ ಇಬ್ಬರು ಸ್ಥಳದಲ್ಲೇ ಮೃತರಾಗಿ, ಮೂವರು ಗಾಯಗೊಂಡಿದ್ದರು. ನಂತರದ ವರ್ಷಗಳಲ್ಲಿ ಅಂತರ್ಜಲ ಮಟ್ಟ ನಿರಂತರವಾಗಿ ಕುಸಿಯಿತು.

ನೀರಿಲ್ಲದ ಪುಷ್ಕರಣಿಗೆ ಜನ ಕಸ ಎಸೆದರು. ಬಳಿಕ ದೇವಾಲಯ ಆಡಳಿತ ಮಂಡಳಿ, ಪುಷ್ಕರಣಿಯ ಎರಡೂ ಬದಿ ಕಲ್ಲಿನ ಮೆಟ್ಟಿಲುಗಳನ್ನು ತೆರವುಗೊಳಿಸಿ, ಕಾಂಕ್ರೀಟ್ ರಚನೆ ನಿರ್ಮಿಸಿದರು. ಸುತ್ತ ಕಬ್ಬಿಣದ ಗ್ರಿಲ್ ಅಳವಡಿಸಿ, ಮಧ್ಯಭಾಗದಲ್ಲಿ ಆರು ಅಡಿಯ ಪೀಠ ಮತ್ತು ಅದರ ಮೇಲ್ಭಾಗದಲ್ಲಿ 9 ಅಡಿ ಶ್ರೀ ತಿಪ್ಪೇ ರುದ್ರಸ್ವಾಮಿ ಮೂರ್ತಿ ಪ್ರತಿಷ್ಠಾಪಿಸಿ, ಪುಷ್ಕರಣಿಗೆ ನೀರು ಬಿಡಲಾಗುತ್ತಿತ್ತು.

**ಜನರ ಪ್ರವೇಶ ನಿರ್ಬಂಧ:** ನಾಯಕನಹಟ್ಟಿ ಪುಷ್ಕರಣಿಯಲ್ಲಿ ದಿಢೀರ್ ಅಂತರ್ಜಲ ಹೆಚ್ಚಳದ ಹಿನ್ನೆಲೆಯಲ್ಲಿ ಪುಷ್ಕರಣಿಯ ಒಂದು ಬದಿ ಕುಸಿಯಲಾರಂಭಿಸಿದೆ. ಬಾವಿಯ ಗೋಡೆ ಒಂದಷ್ಟು ಕುಸಿದಿದೆ. ನೀರು ಹೆಚ್ಚಿದಂತೆ ಗೋಡೆ ಮತ್ತಷ್ಟು ಕುಸಿಯುವ ಅಪಾಯವಿದೆ. ಹೀಗಾಗಿ ಬಾವಿಗೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸಲಾಗಿದೆ.



ಇದೀಗ ಚಿಕ್ಕಕೆರೆಗೆ ನೀರು ಬಂದಿದೆ. ಹೀಗಾಗಿ ಅಂತರ್ಜಲ ಮಟ್ಟ ಹೆಚ್ಚಾಗಿ, ಒಣಗಿದ್ದ ಪುಷ್ಕರಣಿಯಲ್ಲಿ ಗಂಗೆ ಪ್ರತ್ಯಕ್ಷಳಾಗಿದ್ದಾಳೆ. ಕಲ್ಯಾಣಿಯ ಸೌಂದರ್ಯಕ್ಕೆ ಮೆರುಗು ಬಂದಿದೆ. 9 ಅಡಿ ತಿಪ್ಪೇರುದ್ರಸ್ವಾಮಿ ಮೂರ್ತಿಯ ಕತ್ತಿನ ಭಾಗದವರೆಗೆ ನೀರು ಆವರಿಸಿದೆ. ಪುರಾತನ ಕಲ್ಯಾಣಿಯಲ್ಲಿ ಜಲ ಉಕ್ಕಿರುವುದು ಉತ್ತಮ ಬೆಳವಣಿಗೆ. ಆದರೆ ಅಪಾಯ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಲಾಗುವುದು. ಸುತ್ತಲೂ ಬ್ಯಾರಿಕೇಡ್ ಅಳವಡಿಸಿ, ಎಂಜಿನಿಯರ್‌ಗಳ ಸಲಹೆ ಪಡೆದು ಪುಷ್ಕರಣಿ ರಕ್ಷಣೆ ಮತ್ತು ಸೌಂದರ್ಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು.

» **ಎಚ್.ಗಂಗಾಧರಪ್ಪ, ದೇವಾಲಯದ ಇಒ.**

# ಜಂಗೀಕುಸ್ತಿ ಫಲಿತಾಂಶ



ಚಿತ್ರದುರ್ಗ: ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವ ಹಾಗೂ ಶರಣಸಂಸ್ಕೃತಿ ಉತ್ಸವ–2024ರ ಅಂಗವಾಗಿ ದಿನಾಂಕ: 13.10.2024 ರಂದು ಶ್ರೀಮುರುಘಾಮಠದಲ್ಲಿ ಶ್ರೀ ಜಗದ್ಗುರು ಜಯದೇವ ಜಂಗೀಕುಸ್ತಿ ಆಯೋಜಿಸಲಾಗಿತ್ತು.

ಪುರುಷರ ವಿಭಾಗದಲ್ಲಿ-

- **ಚಿನ್ಮೂಲಾದ್ರಿ ಕೇಸರಿ-ಮಧ್ಯಪ್ರದೇಶದ ಸುರೇಶ್ ರಾಥೋಡ್-30,000 ಸಾವಿರ -ಪ್ರಥಮ**
- **ಮಹರಾಷ್ಟ್ರದ ಪಾಲು ಅಮಾದ್-10,000/-ಸಾವಿರ ನಗದು -ದ್ವಿತೀಯ**

ಮಹಿಳೆಯರ ವಿಭಾಗದಲ್ಲಿ

- **ಬೆಳಗಾಂನ ಲಕ್ಷ್ಮಿ ಕೇಸರಿ-ಒನಕೆ ಓಬವ್ವ ಪ್ರಶಸ್ತಿ-15,000/- ನಗದು -ಪ್ರಥಮ**
- **ಬೆಳಗಾಂನ ರಾಣಿ -10,000/-ನಗದು -ದ್ವಿತೀಯ**

ಈ ಕುಸ್ತಿ ಪಂದ್ಯಾವಳಿಯಲ್ಲಿ ವಿವಿಧ ರಾಜ್ಯಗಳಾದ ಆಂದ್ರಪ್ರದೇಶ್, ಮಹಾರಾಷ್ಟ್ರ, ಹಾಗೂ ತಮಿಳುನಾಡು, ಕರ್ನಾಟಕದ ಮೈಸೂರು, ಬೆಳಗಾವಿ, ಹುಬ್ಬಳ್ಳಿ, ದಾರವಾಡ, ದಾವಣಗೆರೆ, ಚಿತ್ರದುರ್ಗ ಜಿಲ್ಲೆಗಳು ಸೇರಿದಂತೆ ಪುರುಷರ ವಿಬಾಗದಲ್ಲಿ ಸುಮಾರು 70 ಜೋಡಿಗಳು, ಮಹಿಳಾ ವಿಭಾಗದಲ್ಲಿ 20 ಜೋಡಿಗಳು ಭಾಗವಹಿಸಿದ್ದವು. ತೀರ್ಪುಗಾರರಾಗಿ ಪೈಲ್ವಾನ್ ತಿಪ್ಪೇಸ್ವಾಮಿ, ಮಹೇಂದ್ರನಾಥ್, ಮರಡಿ ಪೈಲ್ವಾನ್ ತಿಪ್ಪೇಸ್ವಾಮಿ, ಅಫೀಜ್. ಮೂರ್ತಣ್ಣ ಪೈಲ್ವಾನ್ ಅಮೃತ್ ಮೈಸೂರು. ಕಾರ್ಯನಿರ್ವಹಿಸಿದರು. ಕಾರ್ಯಕ್ರಮದಲ್ಲಿ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿ ಅಧ್ಯಕ್ಷರಾದ ಶ್ರೀ ಶಿವಯೋಗಿ ಸಿ ಕಳಸದ, ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿಗಳು, ಶ್ರೀ ಬಸವ ಹರಳಯ್ಯ ಸ್ವಾಮೀಜಿ, ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಹಾಗೂ ವಿವಿಧ ಮಠಾದೀಶರು, ಹರಗುರು ಚರಮೂರ್ತಿಗಳು ಉಪಸ್ಥಿತರಿದ್ದರು.

ಪ್ರಮುಖ ಸುದ್ದಿ

# ಭರಮಸಾಗರದ ಜೋಡಿ ಕೆರೆಗಳಿಗೆ ತರಳ ಬಾಳು ಶ್ರೀ ಬಾಗಿನ

» ನಮ್ಮಜನ ಸಮಾಚಾರ ಸಿರಿಗೆರೆ



ಮೂರ್ನಾಲ್ಕುದಿನಗಳಿಂದಸುರಿಯುತ್ತಿರುವ ಮಳೆ ಹಾಗೂ ತುಂಗಾಭದ್ರೆಯಿಂದ ಹರಿದು ಬರುತ್ತಿರುವ ನೀರಿನಿಂದ ತುಂಬಿ ಕೋಡಿ ಹರಿದಿರುವ ಭರಮಸಾಗರದ ಜೋಡಿ ಕೆರೆಗಳಿಗೆ ತರಳಬಾಳು ಜಗದ್ಗುರು ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ಹಾಗೂ ಶಾಸಕ ಡಾ.ಎಂ.ಚಂದ್ರಪ್ಪ ಒಟ್ಟುಗೂಡಿ ಬಾಗಿನ ಅರ್ಪಿಸಿದರು.

ಈ ವೇಳೆ ಮಾತನಾಡದ ಶ್ರೀಗಳು, ಏತ ನೀರಾವರಿ ಯೋಜನೆ ಯು ಅಮೆರಿಕಕ್ಕೂ ಸುದ್ದಿಯಾಗಿದ್ದು, ಅಮೆರಿಕಾದ ಕ್ಯಾಲಿಫೋರ್ನಿಯ ವಿಶ್ವವಿದ್ಯಾಲಯ ಅಧ್ಯಯನದ ಪೋಸ್ಟ್‌ಡಾಕ್ಟರಲ್ ಸ್ಟಡೀಸ್ ವಿಷಯವನ್ನಾಗಿ ಈ ಯೋಜನೆ ಯನ್ನು ಯನ್ನು ಆಯ್ಕೆ ಮಾಡಿ ಕೊಳ್ಳಲಾಗಿದೆ. ಏತ ನೀರಾವರಿ ಯೋಜನೆ ಬೆಳೆದು ಬಂದ ದಾರಿ ಹಾಗೂ ಇದರ ಉಪ ಯೋಗ ಬಗ್ಗೆ ಅಧ್ಯಯನ ಯನ ನಡೆಯಲಿದೆ.ಕೆರೆದಂಡೆಗೆ ಅಡಿಕೆ ಸಿಪ್ಪೆ ಹಾಕುವುದು ಕಾನೂನು ಬಾಹಿರ. ಆದರೆ ಇವತ್ತು ಕಾನೂನಿಗೆ ಹೆದರುವುದಿಲ್ಲ.

ಕಾನೊನು ಕ್ರಮ ಕೈಗೊಂಡರೂ ಸಹ ಯಾರು ಬುದ್ದಿ ಕಲಿಯುವುದಿಲ್ಲ. ಇದಕ್ಕೆ ಇದೊಂದೇ ಪರಿಹಾರ ಅಲ್ಲ. ಎಲ್ಲರಿಗೂ ಧರ್ಮದ ಬಗ್ಗೆ ಅಪಾರ ಗೌರವ, ನಿಷ್ಠೆ ಇದೆ. ಹಾಗಾಗಿ ಅಂತವರಿಗೆ ಧರ್ಮದ ಹಾದಿಯಲ್ಲಿ ತಿಳಿ ಹೇಳಬೇಕು ಎಂದು ಹೇಳಿದರು.

ಶಾಂತಿವನದಲ್ಲಿ ಅಡಿಕೆ ಸಿಪ್ಪೆಯನ್ನು ಗೊಬ್ಬರವಾಗಿ ಪರಿವರ್ತನೆ ಮಾಡುವ ಕೆಲಸ ನಡೆಯುತ್ತದೆ. ಕೆರೆಯ ಸುತ್ತಮುತ್ತ ಹಾಕಿರುವ ಎಲ್ಲಾ ಅಡಿಕೆ ಸಿಪ್ಪೆಯನ್ನು ಪೂರ್ಣ ಪ್ರಮಾಣದಲ್ಲಿ ತೆಗೆದು ಸಿರಿಗೆರೆ ಶಾಂತಿವನಕ್ಕೆ ರವಾನಿಸಲು ತಿಳಿಸಿದ್ದೇವೆ ಎಂದು ಶ್ರೀಗಳು ತಿಳಿಸಿದರು.

ನೀರಾವರಿ ನಿಗಮದ ಮಾಜಿ ಎಂ.ಡಿ.ಮಲ್ಲಿಕಾರ್ಜುನ ಗುಂಗೆ, ಕೆರೆಸಮಿತಿ ಅಧ್ಯಕ್ಷಶಶಿಪಾಟೀಲ್ ಮುಖಂಡರಾದ ಎಸ್.ಎಂ.ಎಲ್ ತಿಪ್ಪೇಸ್ವಾಮಿ, ಶೈಲೇಶ್‌ಪಾಟೀಲ್, ಸಾ ಮಿಲ್ ಶಿವಣ್ಣ, ಕೋಗುಂಡೆಮಂಜುನಾಥ್, ಡಿ.ವಿ.ಎಸ್. ಪ್ರದೀಪ್, ಸಿ.ಆರ್.ನಾಗರಾಜ್, ಕೊಳಹಾಳಂ ರಾಜಣ್ಣ, ಚಿಕ್ಕಬೆನ್ನೂರು ತೀರ್ಥಪ್ಪ, ಹನುಮಂತಪ್ಪ ಹಾಗೂ ಸಾವಿರಾರು ಭಕ್ತರು ಇದ್ದರು.

**ತರಳಬಾಳು ಹುಣ್ಣಿಮೆ ಮಂಟಪದ ಸ್ಥಳ ವೀಕ್ಷಣೆ ಮಾಡಿದ ಸ್ವಾಮೀಜಿ:** ಭರಮಸಾಗರದಲ್ಲಿ ಫೆಬ್ರವರಿ ತಿಂಗಳಿ ನಲ್ಲಿ 9 ದಿನಗಳ ಕಾಲ ನಡೆಯಲಿರುವ ತರಳಬಾಳು ಹುಣ್ಣಿಮೆ ಮಹೋತ್ಸವ ಮಹಾಮಂಟಪ ನಿರ್ಮಾಣಕ್ಕೆ ಅಗತ್ಯವಾದಸ್ಥಳವೀಕ್ಷಣೆಯನ್ನುಭಾನುವಾರ ತರಳಬಾಳು ಜಗದ್ಗುರು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ಮಾಡಿದರು. ಭರಮಸಾಗರ ಹೊರವಲಯದಲ್ಲಿನ ರಾಷ್ಟ್ರೀಯ ಹೆದ್ದಾರಿ 48ಕ್ಕೆ ಹೊಂದಿಕೊಂಡಿರುವ ಸುಮಾರು 200 ಎಕರೆ ಪ್ರದೇಶವು ಹುಣ್ಣಿಮೆ ಆಚರಣೆಗೆ ಸೂಕ್ತವೆಂದು ನಿರ್ಣಯಿಸಲಾಯಿತು.

ಪೂರ್ವನಿಗದಿಯಂತೆ 2024 ರ ಫೆಬ್ರವರಿಯಲ್ಲಿ ತರಳಬಾಳು ಹುಣ್ಣಿಮೆ ಮಹೋತ್ಸವ ಭರಮಸಾಗರದಲ್ಲಿ ನಡೆಯಬೇಕಿತ್ತು. ಅದರೆ ಆಗ ರಾಜ್ಯದೆಲ್ಲೆಡೆ ಬರ ಬಂದು ರೈತರು ಸಂಕಷ್ಟದಲ್ಲಿದ್ದರಿಂದ ಆಚರಣೆಯನ್ನು ಮುಂದೂಡಿ ಸಿರಿಗೆರೆಯಲ್ಲಿ ಆಚರಿಸಲಾಗಿತ್ತು. ತರಳಬಾಳು ಜಗದ್ಗುರು ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳವರ ಮಾರ್ಗದರ್ಶನ ದಲ್ಲಿ ಭರಮಸಾಗರಮತ್ತು ಜಗಳೂರುಏತನೀರಾವರಿಯೋಜನೆಗಳು ಜಾರಿಯಾಗಿ ಸುಮಾರು 100 ಕೆರೆಗಳು ಭರ್ತಿಯಾಗಿರುವು ದರಿಂದ ಈ ಬಾರಿಯ ಹುಣ್ಣಿಮೆ ಆಚರಣೆಗೆ ವಿಶೇಷ ಮಹತ್ವ ಬಂದಿದೆ. ಈ ಸಂದರ್ಭದಲ್ಲಿ ಶಾಸಕ ಡಾ.ಎಂ.ಚಂದ್ರಪ್ಪ, ಕಾಂಗ್ರೆಸ್ ಮುಖಂಡ ತಿಪ್ಪೇಸ್ವಾಮಿ, ಕರ್ನಾಟಕ ನೀರಾವರಿ ನಿಗಮದ ಮಾಜಿ ವ್ಯವಸ್ಥಾಪಕ ನಿರ್ದೇಶಕ ಮಲ್ಲಿಕಾರ್ಜುನ ಗುಂಗೆ, ಕೋಗುಂಡೆ ಮಂಜುನಾಥ್, ಜಿ.ಬಿ.ತೀರ್ಥಪ್ಪ, ಸಾಮಿಲ್ ಶಿವಣ್ಣ, ಚೌಲಿಹಳ್ಳಿ ಶಶಿ ಪಾಟೀಲ್, ಶೈಲೇಶ್ ಕುಮಾರ್, ಶಾಂತಾ ಅಶೋಕ್, ಕೊಳಹಾಳ್ ರಾಜಣ್ಣ ಇದ್ದರು.

ಫಾಸ್ಟ್ ನ್ಯೂಸ್

## ಸಾಮಾನ್ಯರನ್ನು ಶರಣರನ್ನಾಗಿ ಮಾಡುವ ಶಕ್ತಿ ಶ್ರೀಮಠಕ್ಕಿದೆ

» ಮೊದಲ ಪುಟದಿಂದ

ಸಮಾರಂಭದಲ್ಲಿ ಕಲಬುರಗಿ ಸುಲಫಲ ಮಠದ ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು, ಚಿತ್ರದುರ್ಗ ಶ್ರೀ ಕಬೀರಾನಂದಾಶ್ರಮದ ಸದ್ಗುರು ಶ್ರೀ ಶಿವಲಿಂಗಾನಂದ ಮಹಾಸ್ವಾಮಿಗಳು, ಸೊನ್ನ ದಾಸೋಹ ವಿರಕ್ತಮಠದ ಡಾ. ಶ್ರೀ ಶಿವಾನಂದ ಮಹಾಸ್ವಾಮಿಗಳು, ಎಸ್.ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿ ಸದಸ್ಯರಾದ ಡಾ.ಬಸವಕುಮಾರ ಸ್ವಾಮೀಜಿ, ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಪರಮಶಿವಮೂರ್ತಿ, ಬಾಲವಿಕಾಸ ಅಕಾಡೆಮಿ ಅಧ್ಯಕ್ಷರಾದ ಶ್ರೀ ಸಂಗಮೇಶ್ ಬಬಲೇಶ್ವರ, ಕರ್ನಾಟಕ ರಾಜ್ಯ ಮುದ್ರಣಕಾರರ ಸಂಘದ ಅಧ್ಯಕ್ಷರಾದ ಶ್ರೀ ಬಿ.ಆರ್. ಆಶೋಕ್ ಕುಮಾರ್, ಜಿ.ಎಸ್.ಟಿ. ಸಹಾಯಕ ಆಯುಕ್ತರಾದ ಶ್ರೀ ಮಹಮ್ಮದ್ ರಫಿ ಪಾಷ, ವರ್ತಕರಾದ ಪಾಂಡುರಂಗ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಶ್ರೀ ಯೋಗಿಗೌಡ ಮಿಮಿಕ್ರಿ, ಶ್ರೀ ರಾಘವೇಂದ್ರ ಆಚಾರ್ ಹಾಸ್ಯ ಕಾರ್ಯಕ್ರಮ, ಕಲರ್ಸ್ ಕನ್ನಡದ ಕಾಶಿಂ ಅಲಿ ಮತ್ತು ತಂಡದವರು ಸಂಗೀತ, ಹಿಂದಿ ಸೋನಿ ಟಿ.ವಿ.ಇಂಡಿಯಾ ಗೊ. ಟ್ಯಾಲೆಂಟ್ ಖ್ಯಾತಿಯ ಮಂಗಳೂರಿನ ಸಿಟಿಗೈಸ್ ನೃತ್ಯ ತಂಡ ಹಾಗೂ ಕುಡ್ಲ ಕ್ವೀನ್ಸ್ ತಂಡದವರು ಸಮೂಹ ನೃತ್ಯ ಪ್ರದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಜಮುರಾ ಕಲಾವಿದರು ಪ್ರಾರ್ಥಿಸಿ, ಉಮಾ ರಮೇಶ್ ಸ್ವಾಗತಿಸಿ, ಜಗದೀಶ್ವರಿ ಹಿರೇಮಠ್ ನಿರೂಪಿಸಿ ವಂದಿಸಿದರು.

## ಅ.18 ರಂದು ಅನುಸೂಚಿತ ಜಾತಿ, ಪಂಗಡದ ಸದನಸಮಿತಿ ಸಭೆ

» ದಾವಣಗೆರೆ

ರಾಜ್ಯ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ಅಕ್ಟೋಬರ್ 18 ರಂದು ಮಧ್ಯಾಹ್ನ 3 ಗಂಟೆಗೆ ದಾವಣಗೆರೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕಳೆದ ಮೂರು ವರ್ಷಗಳ ಎಸ್‌ಸಿಪಿ, ಟಿಎಸ್‌ಪಿ ಪ್ರಗತಿ ಪರಿಶೀಲನಾ ಸಭೆ ನಡೆಸಲಿದೆ. ಶಾಸಕರು ಹಾಗೂ ಸದನ ಸಮಿತಿ ಅಧ್ಯಕ್ಷರಾದ ಪಿ.ಎಂ.ನರೇಂದ್ರಸ್ವಾಮಿ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದ್ದು ಶಾಸಕರು ಹಾಗೂ ಸಮಿತಿ ಸದಸ್ಯರಾದ ರಮೇಶ್ ಲಕ್ಷ್ಮಣ್ ರಾವ್ ಜಾರಕಿಹೊಳಿ, ಡಾ; ಎಂ.ಚಂದ್ರಪ್ಪ, ಐಹೊಳೆ ದುರ್ಯೋದನ ಮಹಾಲಿಂಗಪ್ಪ, ಜಿ.ಹಂಪಯ್ಯ ನಾಯಕ್ ಬಲ್ಲಟಗಿ, ಎಸ್.ಎನ್.ಸುಬ್ಬಾರೆಡ್ಡಿ, ಬಸನಗೌಡ ತುರುವಿಹಾಳ್, ಅಬ್ಬಯ್ಯ ಪ್ರಸಾದ, ಬಸವರಾಜ್ ಮುತ್ತಿಮೂಡ್, ನೇಮಿರಾಜ್ ನಾಯ್ಕ್, ಎನ್.ಶ್ರೀನಿವಾಸಯ್ಯ, ಬಿ.ದೇವೇಂದ್ರಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ಕೃಷ್ಣನಾಯ್ಕ, ಕೆ.ಎಸ್.ಬಸವಂತಪ್ಪ, ಎನ್.ರವಿಕುಮಾರ್, ಡಾ; ಡಿ.ತಿಮ್ಮಯ್ಯ, ರಾಜೇಂದ್ರ ರಾಜಣ್ಣ, ಸಿ.ಎನ್.ಮಂಜೇಗೌಡ, ಹೇಮಲತಾ ನಾಯಕ ಇವರುಗಳು ಭಾಗವಹಿಸುವರು. ಅನುಸೂಚಿತ ಜಾತಿ ಹಾಗೂ ಪಂಗಡಗಳ ಸಮುದಾಯದವರ ಸಮಸ್ಯೆಗಳು, ಕುಂದುಕೊರತೆಗಳ ಕುರಿತಂತೆ ಸಂಘ, ಸಂಸ್ಥೆಯವರು ಹಾಗೂ ಸಾರ್ವಜನಿಕರು ಸಾರ್ವಜನಿಕ ಹಿತಾಸಕ್ತಿಯುಳ್ಳ ಸಮಸ್ಯೆಗಳು, ಕುಂದುಕೊರತೆಗಳಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳಿಗೆ ತಮ್ಮ ಮನವಿಗಳನ್ನು ಸಲ್ಲಿಸಬಹುದಾಗಿದೆ. ಈಗೆ ಸಲ್ಲಿಸಿದ ಅರ್ಜಿಗಳನ್ನು ಜಿಲ್ಲಾಧಿಕಾರಿಯವರು ಸದನ ಸಮಿತಿ ಸಭೆಯ ವೇಳೆ ಅಧ್ಯಕ್ಷರಿಗೆ ಸಲ್ಲಿಸುವರು ಎಂದು ರಾಜ್ಯ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಂ.ಕೆ.ವಿಶಾಲಾಕ್ಷಿ ತಿಳಿಸಿದ್ದಾರೆ.

## ಮಹಿಳೆಯರು ಎಂದರೆ ಶಕ್ತಿಯುತ ದೇವತೆಯರು



» ಹೊಸದುರ್ಗ

ದುರ್ಗೆ,ಚಂಡಿ, ಚಾಮುಂಡಿ,ಆಧಿಶಕ್ತಿ, ಪರಮೇಶ್ವರಿ, ಜಗನ್ಮಾತೆ ಇವರೆಲ್ಲ ಮಹಿಳೆಯರೆ, ಇವರೆಲ್ಲ ಶಕ್ತಿ ದೇವತೆಯರು ಮಹಿಳೆಯರು ಅನ್ಯಾಯದ ವಿರುದ್ಧ ಸಿಡಿದೆದ್ದರೆ ಶಕ್ತಿ ದೇವತೆಗಳಾಗುತ್ತಾರೆ ಎಂದು ವಿಶ್ವನಾಥಚಾರ್ ತಿಳಿಸಿದರು. ಪಟ್ಟಣದ ಶ್ರೀ ಕಾಳಿಕದೇವಿ ದೇವಸ್ಥಾನದಲ್ಲಿ ತಾಲ್ಲೂಕು ವಿಶ್ವ ಕರ್ಮ ಮಹಿಳಾ ಅಭಿವೃದ್ಧಿ ಸಂಘದ ವತಿಯಿಂದ ಉಚಿತ ಹೊಲಿಗೆ ಕೇಂದ್ರವನ್ನ ಉದ್ಘಾಟಿಸಿ ಮಾತನಾಡಿದರು.ಇಲ್ಲಿನ ಮಹಿಳಾ ಸಂಘದವರು ಉತ್ತಮವಾದ ಕಾರ್ಯಕ್ರಮಗಳನ್ನ ಆಯೋಜನೆ ಮಾಡಿದ್ದಾರೆ, ದಸರಾ ದಿನದಂದು ಹೊಲಿಗೆ ಕೇಂದ್ರವನ್ನ ಮಹಿಳೆಯರಿಗಾಗಿ ಪ್ರಾರಂಭಿಸಿರುವುದು ನಿಜಕ್ಕೂ ಶ್ಲಾಘನೀಯ ಮಹಿಳೆಯರು ಮನಸ್ಸು ಮಾಡಿದರೆ ಹೇನು ಬೇಕಾದರೂ ಸಹಾ ಸಾಧನೆ ಮಾಡಬಹುದು ಈ ನಿಟ್ಟಿನಲ್ಲಿ ನೀವುಗಳು ಮುಂದೆ ಸಮಾಜ ಮುಖಿಯಾದ ಕಾರ್ಯಗಳನ್ನ ಮಾಡುತ್ತಾ ಸಮಾಜದ ಮುಖ್ಯ ವಾಹಿನಿಗೆ ಬನ್ನಿ ಎಂದು ಕರೆ ನೀಡಿದ ಅವರು ನಿಮಗೆಲ್ಲರಿಗೂ ಆಧಿಶಕ್ತಿ ಚಾಮುಂಡಿಯ ಕೃಫೆ ಇರಲಿ ಎಂದು ಶುಭ ಹಾರೈಸಿದರು.ಕಾರ್ಯಕ್ರಮದಲ್ಲಿ ಮಹಿಳಾ ಅಧ್ಯಕ್ಷೆ ಶ್ರೀಮತಿ ವಾಣಿ ತ್ಯಾಗರಾಜ್ ,ಕಾರ್ಯದರ್ಶಿ ಕಾಮಾಕ್ಷಿ ಭಾಗವಹಿಸಿದ್ದರು.


# ಜನಗಣತಿ ವರದಿ ಬಿಡುಗಡೆಗೊಳಿಸಲು ಆಗ್ರಹ

» ಚಿತ್ರದುರ್ಗ

ರಾಜ್ಯ ಸರ್ಕಾರ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅ. 18 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಜಾತಿ ಜನಗಣತಿ ವರದಿಯನ್ನು ಒಪ್ಪಿ ಬಿಡುಗಡೆಗಾಗಿ ಒತ್ತಾಯಿಸಿ 16 ರಂದು ಬೆಂಗಳೂರಿನ ಫ್ರೀಡಂ ಪಾರ್ಕಿನಲ್ಲಿ ಹಕ್ಕೊತ್ತಾಯ ಸಮಾವೇಶ ಆಯೋಜಿಸಲಾಗಿದೆ ಎಂದು ಅಖಿಲ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಅಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಎಲ್ಲಾ ಜಾತಿಗಳ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ತಯಾರಿಸಲಾಗಿರುವ ಸಮೀಕ್ಷಾವರದಿಯನ್ನು ಜಾರಿಗೊಳಿಸಲು ರಾಜ್ಯ ಸರ್ಕಾರ ಮೀನಾಮೇಷಾ ಎಣಿಸುವ ಅಗತ್ಯವಿಲ್ಲ. ಸುಮಾರು 159 ಕೋಟಿ ರೂ. ಗಳನ್ನು ಖರ್ಚು ಮಾಡಿ ತಯಾರಿಸಿರುವ ಈ ವರದಿಯು ತಕ್ಷಣ ಫಲಪ್ರದ ಆಗಬೇಕು. ಅಕ್ಟೋಬರ್ 18ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ರವರು ಹೇಳಿರುವುದು ಸ್ವಾಗತಾರ್ಹ ಎಂದರು.

ಕರ್ನಾಟಕ 12ನೇ ಶತಮಾನದಲ್ಲೇ ಸಮಸಮಾಜವನ್ನು ಪ್ರತಿಪಾದಿಸಿದ ರಾಜ್ಯ. ಇಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ಮೈಸೂರು ಸಂಸ್ಥಾನದಲ್ಲಿ ಮೀಸಲಾತಿ ಜಾರಿ ಮಾಡಲಾಗಿತ್ತು. ದಿವಂಗತ ದೇವರಾಜ ಅರಸು ಅವರು



'ಹಾವನೂರು ಆಯೋಗ' ರಚಿಸಿ ಹಿಂದುಳಿದ ವರ್ಗಗಳ ಅಧ್ಯಯನಕ್ಕೆ ಮುನ್ನುಡಿ ಬರೆದರು. ಮಾಜಿ ಮುಖ್ಯಮಂತ್ರಿ ಎಂ. ವೀರಪ್ಪ ಮೊಯ್ಲಿ ಅವರು ಮೀಸಲಾತಿ ಮಿತಿಯನ್ನು ಶೇಕಡಾ 73ಕ್ಕೆ ಏರಿಸುವ ಪ್ರಯತ್ನ ಮಾಡಿದ್ದರು. ಅಂದಿನಿಂದಲೂ ಸಾಮಾಜಿಕ ನ್ಯಾಯದ ಪರವಾಗಿರುವ ಕರ್ನಾಟಕ ಈಗ ಜಾತಿ ಜನಗಣತಿ ಅಥವಾ ರಾಜ್ಯದ ಎಲ್ಲಾ ಜಾತಿಗಳ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ಸಮೀಕ್ಷಾ ವರದಿಯನ್ನು ತಯಾರಿಸಿರುವುದು ಇಡೀ ದೇಶಕ್ಕೆ ಮಾದರಿಯಾಗಿದೆ ಎಂದು ತಿಳಿಸಿದರು.

ಒಕ್ಕೂಟದ ರಾಜ್ಯ ಸಂಚಾಲಕ ಬಿ.ಟಿ.ಜಗದೀಶ್ ಮಾತನಾಡಿ, ರಾಜ್ಯದ ಜನಸಂಖ್ಯೆಯ ಮುಕ್ಕಾಲು ಭಾಗಕ್ಕೂ ಜಾಸ್ತಿ ಇರುವ ಅಹಿಂದ ವರ್ಗಗಳಿಗೆ ಅವರ ಜನಸಂಖ್ಯೆಗೆ ಅನುಗುಣವಾಗಿ ರಾಜಕೀಯ ಪ್ರಾತಿನಿಧ್ಯ, ಉದ್ಯೋಗದ ಅವಕಾಶಗಳು ಮತ್ತು ವಿದ್ಯಾಭ್ಯಾಸದ ಅವಕಾಶಗಳು ಲಭಿಸಿಲ್ಲ. ಅಹಿಂದ ವರ್ಗಗಳಲ್ಲಿ ಅರಿವು ಮತ್ತು ಸಂಘಟನೆಯ ಕೊರತೆಯ ಕಾರಣಕ್ಕಾಗಿ ಅವಕಾಶಗಳು ಸಿಕ್ಕಿಲ್ಲ ಎನ್ನುವುದರ ಜೊತೆಗೆ ನಿರ್ಧಿಷ್ಟವಾಗಿ ಅವರ ಜನಸಂಖ್ಯಾ ಪರಿಸ್ಥಿತಿ ಗೊತ್ತಿಲ್ಲದಿರುವುದು ಪ್ರಮುಖ ಕಾರಣವಾಗಿದೆ. ಜಾತಿ ಜನಗಣತಿಯ ವರದಿಯು ಹೊರಗೆ ಬಂದರೆ ಜಾತಿಗಳ ವಸ್ತುಸ್ಥಿತಿ ತಿಳಿಯಲಿದೆ. ಅದಕ್ಕೆ ಪೂರಕವಾಗಿ ಸರ್ಕಾರಗಳು ಕಾರ್ಯಕ್ರಮಗಳನ್ನು ರೂಪಿಸಬಹುದಾಗಿದೆ ಎಂದರು.

ಈಗ ರಾಜ್ಯದ ಸುಮಾರು ಆರೂವರೆ ಕೋಟಿ ಜನಸಂಖ್ಯೆಯ ಅಧ್ಯಯನವಾಗಿರುವುದರಿಂದ ಜಾತಿ ಜನಗಣತಿಯನ್ನು ಸರ್ಕಾರ ಒಪ್ಪಿಕೊಳ್ಳುವುದರಿಂದ ಎಲ್ಲಾ ಜಾತಿಗಳಿಗೂ ಒಂದಲ್ಲ ಒಂದು ರೀತಿಯಲ್ಲಿ ಅನುಕೂಲ ಆಗಲಿದೆ. ಹಾಗಾಗಿ ಎಲ್ಲಾ ಜಾತಿಗಳು ಕೂಡ ಜಾತಿ ಜನಗಣತಿ ವರದಿ ಬಿಡುಗಡೆಗೆ ಸರ್ಕಾರದ ಮೇಲೆ ಒತ್ತಡ ತರಬೇಕಾಗಿರುವುದು ನ್ಯಾಯ ಸಮ್ಮತವಾಗಿದೆ. ಮೀಸಲಾತಿ ಪರಿಷ್ಕರಣೆ, ಜಾತಿಗಳನ್ನು ಹೊಸ ವರ್ಗಕ್ಕೆ ಸೇರಿಸುವುದು ಅಥವಾ ಕೈಬಿಡುವುದು ಎಲ್ಲಕ್ಕೂ ಸುಪ್ರೀಂ ಕೋರ್ಟ್ ಯಾವುದಾದರೂ ಸಾಂವಿಧಾನಿಕ ಸ್ಥಾನಮಾನ ಇರುವ ಆಯೋಗದ ದತ್ತಾಂಶವನ್ನು ಕೇಳುತ್ತದೆ. ಇದು ಮಂಡಲ್ ವರದಿ ಅನುಷ್ಠಾನವನ್ನು ಪ್ರಶ್ನಿಸಿದ್ದ ಅರ್ಜಿಯಿಂದ ಹಿಡಿದು ಹಲವಾರು ಪ್ರಕರಣಗಳಲ್ಲಿ ಕಂಡುಬಂದಿದೆ. ಆದುದರಿಂದಜಾತಿಗಳಸಾಮಾಜಿಕ,ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳನ್ನು ಅಧ್ಯಯನ ನಡೆಸಿ ತಯಾರಿಸಲಾಗಿರುವ ಸಮೀಕ್ಷಾ ವರದಿಯನ್ನು ರಾಜ್ಯ ಸರ್ಕಾರ ಒಪ್ಪಿಕೊಂಡು ಬಿಡುಗಡೆ ಮಾಡಬೇಕಾಗಿರುವುದು ಅತ್ಯಾವಶ್ಯಕವಾಗಿದೆ ಎಂದು ಸರ್ಕಾರವನ್ನು ಆಗ್ರಹಿಸಿದರು.

ಮಹಾ ಒಕ್ಕೂಟದ ಪ್ರಧಾನ ಕಾರ್ಯದರ್ಶಿಗಳಾದ ಹೆಚ್. ಮಂಜಪ್ಪ ಮಾತನಾಡಿ, ಬಡವರು, ರೈತರು, ಮಹಿಳೆಯರು, ದಲಿತರು, ಅಲ್ಪಸಂಖ್ಯಾತರು ಮತ್ತು ಹಿಂದುಳಿದ ವರ್ಗದವರ ಬಗ್ಗೆ ಅಪಾರವಾದ ಕಾಳಜಿ ಇರುವ ಸದಾ ಸಾಮಾಜಿಕ ನ್ಯಾಯದ ಪರ ಇರುವ ಸಿದ್ದರಾಮಯ್ಯ ರವರು ಮುಖ್ಯಮಂತ್ರಿಯಾಗಿರುವುದರಿಂದ ಅವರು ರಾಜ್ಯದ ಏಳು ಕೋಟಿ ಜನರಿಗೂ ಅನುಕೂಲ ಆಗುವಂತಹ ಈ ಜಾತಿ ಜನಗಣತಿ ವರದಿಯನ್ನು ಒಪ್ಪಿ ಬಿಡುಗಡೆ ಮಾಡಬೇಕು. ಕಾಂಗ್ರೆಸ್ ಪಕ್ಷ ತನ್ನ ಚುನಾವಣಾ ಪ್ರಣಾಳಿಕೆಯಲ್ಲಿ ಜಾತಿ ಜನಗಣತಿ ನಡೆಸುವುದಾಗಿ ವಾಗ್ದಾನ ನೀಡಿತ್ತು ಎನ್ನುವುದನ್ನು ಮರೆಯಬಾರದು. ಕೊಟ್ಟ ಮಾತಿನಂತೆ ಈಗ ಜಾತಿ ಜನಗಣತಿ ವರದಿಯನ್ನು ಒಪ್ಪಿ ಬಿಡುಗಡೆ ಮಾಡಿ 'ನಾವು ನುಡಿದಂತೆ ನಡೆಯುವವರು' ಎನ್ನುವುದನ್ನು ಸಾಬೀತು ಮಾಡಬೇಕು ಎಂದು ಒತ್ತಾಯಿಸಿದರು.

ಅ. 18 ರಂದು ನಡೆಯುವ ಸಚಿವ ಸಂಪುಟ ಸಭೆಯಲ್ಲಿ ಜಾತಿ ಜನಗಣತಿ ವರದಿಯನ್ನು ಮಂಡಿಸಿದಾಗ ಕೆಲವರು ಆಕ್ಷೇಪ ಎತ್ತಿ ಅದನ್ನು ಒಪ್ಪಬೇಕೋ–ಬೇಡವೋ ಎಂದು ನಿರ್ಧರಿಸುವ ಅಭಿಪ್ರಾಯ ಸಂಪುಟ ಸಭೆಯ ಅಧಿಕಾರ. ಆದರೆ ಸಂಪುಟ ಸಭೆಯಲ್ಲಿ ಮಂಡಿಸಬಾರದು ಎಂಬುದು ಗೂಂಡಾ ಪ್ರವೃತ್ತಿ. ಸರ್ವಾಧಿಕಾರಿ ಧೋರಣೆ. ಇದು ಪ್ರಜಾಪ್ರಭುತ್ವಕ್ಕೆ ಮಾರಕ. ಇಂತಹ ಜೊಳ್ಳು ಬೆದರಿಕೆಗೆ ತಲೆ ಕೆಡಿಸಿಕೊಳ್ಳದೆ ಮಾನ್ಯ ಸಿದ್ದರಾಮಯ್ಯ ನವರು ಮತ್ತು ಅವರ ಸಂಪುಟವು ಯಾವುದೇ ಕಾರಣಕ್ಕೂ ಹಿಂದೆ ಸರಿಯಬಾರದು ಎಂದು ಮುಖ್ಯಮಂತ್ರಿಯವರನ್ನು ಒತ್ತಾಯಿಸಿದ್ದಾರೆ.

ಮಹಾ ಒಕ್ಕೂಟದ ಸಂಚಾಲಕರಾದ ದುರುಗೇಶಪ್ಪ ಪ್ರಸನ್ನ ಕುಮಾರ್, ನಗರಸಭೆಯ ಮಾಜಿ ಅಧ್ಯಕ್ಷ ನಿರಂಜನ ಮೂರ್ತಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಅ.15 ಮತ್ತು 16 ರಂದು ರಾಜ್ಯ ಮಟ್ಟದ ಜೂಡೋ ಕ್ರೀಡಾಕೂಟ

» ಚಿತ್ರದುರ್ಗ

ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), ನಮ್ಮ ಎಕ್ಸ್‌ಪರ್ಟ್ಸ್ ಪಿ.ಯು ಕಾಲೇಜು ಸಹಯೋಗದಲ್ಲಿ ಇದೇ ಅ.15 ಮತ್ತು 16ರಂದು ಬೆಳಿಗ್ಗೆ 10ಕ್ಕೆ ನಗರದ ಒನಕೆ ಓಬವ್ವ ಒಳಾಂಗಣ ಕ್ರೀಡಾಂಗಣದಲ್ಲಿ ರಾಜ್ಯ ಮಟ್ಟದ ಜೂಡೋ ಕ್ರೀಡಾಕೂಟ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕ್ರೀಡಾಕೂಟ ಉದ್ಘಾಟಿಸುವರು. ಸಂಸದ ಗೋವಿಂದ ಎಂ ಕಾರಜೋಳ ಘನ ಉಪಸ್ಥಿತಿ ವಹಿಸುವರು. ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್. ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಆದಿಜಾಂಬವ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್. ಭಾಗವಹಿಸುವರು. ವಿಶೇಷ ಆಹ್ವಾನಿತರಾಗಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ನಿರ್ದೇಶಕಿ ಬಿ.ಸಿಂಧೂ, ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಉಪನಿರ್ದೇಶಕ ಆರ್.ಪುಟ್ಟಸ್ವಾಮಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಹಾಗೂ ಸಹಾಯಕ ನಿರ್ದೇಶಕ (ಕ್ರೀಡೆ) ಗುಬ್ಬಿಗೂಡು ರಮೇಶ್, ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ಸುಚೇತಾ ಎಂ ನೆಲವಿಗಿ, ಪ್ರಾಂಶುಪಾಲರ ಸಂಘದ ಅಧ್ಯಕ್ಷ ಎಸ್. ದೇವೇಂದ್ರಪ್ಪ ಭಾಗವಹಿಸುವರು.

ಕಾರ್ಯದರ್ಶಿ ಆರ್.ಮುಸ್ತಾಫ್, ಖಜಾಂಚಿ ಜೆ.ರಂಗಸ್ವಾಮಿ, ಉಪನ್ಯಾಸಕ ಸಂಘದ ಅಧ್ಯಕ್ಷ ಬಿ.ಆರ್.ಮಲ್ಲೇಶ್, ಜೂಡೋ ಹಿರಿಯ ತರಬೇತುದಾರೆ ಡಾ.ಎಂ.ಎನ್.ತ್ರಿವೇಣಿ, ಕ್ರೀಡಾ ಸಂಯೋಜಕ ಎ.ಎಸ್. ರಂಗಪ್ಪ, ಐಡಿಯಲ್ ಎಜುಕೇಷನ್ ಸೊಸೈಟಿ ಹಾಗೂ ನಮ್ಮ ಎಕ್ಸ್‌ಪರ್ಟ್ಸ್ ಪಿ.ಯು ಕಾಲೇಜು ಪ್ರಾಂಶುಪಾಲ ಪಿ.ಅರುಣ್ ಕುಮಾರ್ ಭಾಗವಹಿಸುವರು ಎಂದು ತಿಳಿಸಿದೆ.


### ಎಲ್ಲದಂರಲ್ಲಿ ಬೀಡಾಡಿ ದನಗಳು: ಸಾರ್ವಜನಿಕರ ಅಸಮದಾನ



» ಚಳ್ಳಕೆರೆ

ಜಿಲ್ಲೆಯ ಚಳ್ಳಕೆರೆ ನಗರ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದೊಂದಿಗೆ ಎಲ್ಲರ ಗಮನ ಸೆಳೆಯುತ್ತಿದೆ. ಬಳ್ಳಾರಿ ಮತ್ತು ಪಾವಗಡ ರಸ್ತೆ ಹೊರತು ಪಡಿಸಿ ಬೆಂಗಳೂರು ಮತ್ತು ಚಿತ್ರದುರ್ಗ ರಸ್ತೆಗಳು ಅಗಲೀಕರಣಗೊಂಡು ಸಾರ್ವಜನಿಕರ ಮತ್ತು ವಾಹನಗಳ ಓಡಾಟಕ್ಕೆ ಹೆಚ್ಚುಸಹಕಾರಿಯಾಗಿದೆ. ಆದರೆ, ನಗರದ ಚಿತ್ರದುರ್ಗ ರಸ್ತೆ ರಾಷ್ಟ್ರೀಯ ಹೆದ್ದಾರಿ ವ್ಯಾಪ್ತಿಯಲ್ಲಿ ಅಗಲೀಕರಣಗೊಂಡರೂ ಸಹ ದಿನನಿತ್ಯ ಬೆಳಗಿನಿಂದ ಸಂಜೆವರೆಗೂ ಯಾವುದೇ ರೀತಿಯ ಅಡೆತಡೆ ಇಲ್ಲದೆ ರಾಜರೋಷವಾಗಿ ಓಡಾಡುವ ನೂರಾರು ಬೀಡಾಡಿದನಗಳಿಂದ ಸಾರ್ವಜನಿಕರು ಪ್ರತಿನಿತ್ಯ ಸಮಸ್ಯೆಯನ್ನು ಎದುರಿಸುತ್ತಿದ್ದಾರೆ. ನಗರದ ತಾಲ್ಲೂಕು ಕಚೇರಿ ಮುಂಭಾಗ, ನೆಹರೂ ವೃತ್ತ, ಕೋರ್ಟ್ ರಸ್ತೆ, ಬಿಎಂ ಸರ್ಕಾರಿ ಪ್ರೌಢಶಾಲಾ ಮುಂಭಾಗದಲ್ಲಿ ಎಲ್ಲದಂರಲ್ಲೆ ಹತ್ತಾರು ಜಾನುವಾರುಗಳು ಒಟ್ಟಿಗೆ ರಸ್ತೆಯ ತುಂಬಾ ಮಲಗುವುದು ಅಡ್ಡಾದಿಡ್ಡಿಯಾಗಿ ಓಡಾಡುವ ಮೂಲಕ ಜನರು ಹಾಗೂ ವಾಹನ ಸಂಚಾರಕ್ಕೆ ತೊಂದರೆ ಉಂಟು ಮಾಡುತ್ತಿವೆ. ಈ ಬಗ್ಗೆ ಯಾವುದೇ ಇಲಾಖೆಗಳು ಗಮನಹರಿಸದೇ ಇರುವುದು ನೋವಿನ ಸಂಗತಿ ಎಂದು ಪತ್ರಿಕೋದ್ಯಮಿ ಜಿ.ಯಶವಂತಕುಮಾರ್, ಕರೀಕೆರೆ ನಾಗರಾಜು, ಎಂ.ಸಂಜೀವಪ್ಪ, ಕೆ.ಎಸ್.ನಾಗರಾಜು, ಚಂದ್ರಶೇಖರ್ಐತಾಳ್, ಎಸ್.ಗೋಪಿನಾಥ, ಎಂ.ಎಸ್.ಮಾರುತೇಶ್ ಮುಂತಾದವರು ಅಸಮದಾನ ವ್ಯಕ್ತಪಡಿಸಿದ್ಧರೆ. ಚಳ್ಳಕೆರೆನಗರದ ರಸ್ತೆಗಳು ವಿಸ್ತರಣೆಗೊಂಡು ಸಾರ್ವಜನಿಕರಿಗೆ ಒಂದುಕಡೆ ಸಂತೋಷವನ್ನುಂಟು ಮಾಡಿದರೂ ಬೀಡಾಡಿದನಗಳ ಕಾಟದಿಂದ ಸಾರ್ವಜನಿಕರಿಗೆ ಪ್ರತಿನಿತ್ಯ ಕಸಿವಿಸಿಯಾಗುತ್ತಿದೆ. ಆದ್ದರಿಂದಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಬೀಡಾಡಿದನಗಳ ಓಡಾಟಕ್ಕೆ ಬ್ರೇಕ್ ಹಾಕುತ್ತಾರೇ ಕಾದುನೋಡಬೇಕಿದೆ.

# ಅನುಭವ ಮಂಟಪದಲ್ಲಿ ಮಕ್ಕಳ ಸಂಭ್ರಮ





» ಚಿತ್ರದುರ್ಗ

ಶ್ರೀ ಜಯದೇವ ಜಗದ್ಗುರುಗಳ 150ನೇ ಜಯಂತ್ಯುತ್ಸವ ಹಾಗೂ ಶರಣಸಂಸ್ಕೃತಿ ಉತ್ಸವ –2024 ನಿಮಿತ್ತ ಅನುಭವ ಮಂಟಪದಲ್ಲಿ ಮಕ್ಕಳ ಸಂಭ್ರಮ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಜಕ್ಕನಕಟ್ಟೆ ರಾಣಿಚೆನ್ನಮ್ಮ ವಸತಿ ಶಾಲೆಯ ಚಿ.ಅನುಷ.ಕೆ.ಹಿರೇಮಠ ಮಾತನಾಡಿ, ಮಠಗಳು ಸಮಾಜದ ಸರ್ವ ವಿಕಾಸಕ್ಕೆ ಸಹಕಾರಿಯಾಗಿವೆ. ನಾವುಗಳು ಆಯುಧ ಪೂಜೆಯಲ್ಲಿ ಆಯುಧ, ವಸ್ತುಗಳನ್ನು ಪೂಜಿಸುತ್ತೇವೆ. ಆದರೆ ಪುಸ್ತಕ ಎಂಬ ಆಯುಧ ಪೂಜಿಸಿದರೆ ಸಮಾಜದ ಸರ್ವತೋಮುಖ ಬೆಳವಣಿಗೆ ಸಾಧ್ಯ. ಅನುಭವದಿಂದ ಹುಟ್ಟಿ ಬಂದಿದ್ದು ವಚನ ಸಾಹಿತ್ಯ. ವಚನ ಎಂಬುದು ಹನ್ನೆರಡನೇ ಶತಮಾನದ ಮುಂಚೆಯೇ ಹುಟ್ಟಿತ್ತು. ಇದನ್ನು ಜೇಡರ ದಾಸಿಮಯ್ಯರ ಕೃತಿಗಳಲ್ಲಿ ಕಾಣಬಹುದು. ಈ ವಚನವು ನಡುಗನ್ನಡದಲ್ಲಿ ಹೆಚ್ಚು ಪ್ರಸಿದ್ಧಿ. ಬಸವಣ್ಣನವರು ಸ್ತ್ರೀ ಸ್ವಾತಂತ್ರ,ಸಮಾನತೆಯ,ಕ್ರಾಂತಿ ಪ್ರಾರಂಭಿಸಿದರು. 770 ಶರಣರಿಗೆ ಅನುಭವಮಂಟಪ ನಿರ್ಮಾಣದ ಮೂಲಕ ವಚನ ಕ್ರಾಂತಿ ಮಾಡಿಸಿದರು ಎಂದರು. ಕಾರ್ಯಕ್ರಮದಲ್ಲಿ ತಿಂತಿಣಿ ಶ್ರೀ ಕನಕ ಗುರುಪೀಠದ ಶ್ರೀ ಸಿದ್ಧರಾಮಾನಂದಪುರಿ ಸ್ವಾಮಿಗಳು, ಚಿತ್ರದುರ್ಗ ಶ್ರೀ ಮಡಿವಾಳ ಮಾಚಿದೇವ ಗುರುಪೀಠದ ಶ್ರೀ ಜಗದ್ಗುರು ಬಸವ ಮಾಚಿದೇವ ಸ್ವಾಮಿಗಳು, ಅಥಣಿ ಶ್ರೀ ಗಚ್ಚಿನಮಠದ ಶ್ರೀ ಶಿವಬಸವ ಗುರುಮುರುಘರಾಜೇಂದ್ರ ಸ್ವಾಮಿಗಳು, ಎಸ್. ಜೆ.ಎಂ.ವಿದ್ಯಾಪೀಠದ ಆಡಳಿತಮಂಡಳಿಯ ಸದಸ್ಯರಾದ ಡಾ.ಬಸವಕುಮಾರ ಸ್ವಾಮಿಗಳು, ಶ್ರೀ ಎಸ್.ಎನ್. ಚಂದ್ರಶೇಖರ್, ಹರಗುರು ಚರಮೂರ್ತಿಗಳು ಉಪಸ್ಥಿತರಿದ್ದರು.

ಇಂಡಿಯಾ ಬುಕ್ ಆಫ್ ರೆಕಾರ್ಡ್ ಬಹುಮುಖ ಪ್ರತಿಭೆ ಅಥಣಿಯ ಚಿ.ಶ್ರಾವ್ಯ ಸದಾಶಿವ ಚಿಕ್ಕಟ್ಟಿ– ಭಾಷಣ, ಜೀ ಕನ್ನಡ ಹಾಗೂ ಸೋನಿ ಟಿ.ವಿ. ಖ್ಯಾತ ಬಹುಮುಖ ಪ್ರತಿಭೆ ಚಿ.ದಿಯಾ ಹೆಗಡೆ, ಕಲರ್ಸ್ ಕನ್ನಡ ಪ್ರತಿಭೆ ಚಿ.ಮಹನ್ಯ ಗುರು ಪಾಟೀಲ, ಕಲರ್ಸ್ ಕನ್ನಡ ಪ್ರತಿಭೆ ಚಿ.ಅರ್ಜುನ್ ಇಟಗಿ ಸಂಗೀತ, ಸ್ಟೆಪ್ಸ್ & ಸ್ಟೈಲ್ ತಂಡದವರು ಹಾಗೂ ಡ್ಯಾನ್ಸ್ ಅಕಾಡೆಮಿಯವರು ಸಮೂಹ ನೃತ್ಯ, ಬಹುಮುಖ ಪ್ರತಿಭೆಗಳಾದ ಮಂಗಳೂರಿನ ಚಿ.ವಂಶಿಕ, ಉಡುಪಿಯ ಚಿ.ಆಯಷಾ ಇವರು ನೃತ್ಯ ಪ್ರದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಚಿ.ಶ್ರಾವ್ಯ ಸದಾಶಿವ ಚಿಕ್ಕಟ್ಟಿ ಪ್ರಾರ್ಥಿಸಿ, ಶ್ರೀ ಶಿವಬಸವ ಸ್ವಾಮೀಜಿಗಳು ಸ್ವಾಗತಿಸಿ, ಚಿ.ಮಹನ್ಯ ಗುರು ಪಾಟೀಲ ನಿರೂಪಿಸಿದರು.

## ಒಳ ಮೀಸಲಾತಿ ಜಾರಿಗೆ ಒತ್ತಾಯಿಸಿ ಅ.16 ರಂದು ಬೃಹತ್ ಪ್ರತಿಭಟನೆ



» ಚಿತ್ರದುರ್ಗ

ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ಆಯಾ ರಾಜ್ಯಗಳಿಗಿದೆ ಎಂದು ಸುಪ್ರೀಂಕೋರ್ಟ್ ಮಹತ್ತರ ತೀರ್ಪು ನೀಡಿದ್ದರೂ ರಾಜ್ಯ ಸರ್ಕಾರ ಮೀನಾಮೇಷ ಎಣಿಸುತ್ತಿರುವುದನ್ನು ವಿರೋಧಿಸಿ ದಲಿತ ಸಂಘಟನೆಗಳ ವತಿಯಿಂದ ಅ.16 ರಂದು ಬೃಹತ್ ಪ್ರತಿಭಟನಾ ರ್‍ಯಾಲಿ ನಡೆಸಿ ಜಿಲ್ಲಾಧಿಕಾರಿ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದೆಂದು ಎಂ.ಶಿವಮೂರ್ತಿ ಚಳ್ಳಕೆರೆ ಇವರು ತಿಳಿಸಿದರು.ಪತ್ರಕರ್ತರ ಭವನದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ನೀಲಕಂಠೇಶ್ವರಸ್ವಾಮಿ ದೇವಸ್ಥಾನದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಮೆರವಣಿಗೆ ನಡೆಸಿ ಒಳ ಮೀಸಲಾತಿ ಜಾರಿಗೆ ಒತ್ತಾಯಿಸಲಾಗುವುದು. ವಿವಿಧ ದಲಿತ ಸಂಘಟನೆಗಳ ಮುಖಂಡರು, ಚಿಂತಕರು, ಸಾಹಿತಿಗಳು, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ

ಎಂ.ಶಿವಮೂರ್ತಿ ಮನವಿ ಮಾಡಿದರು. ಕೆ.ಟಿ.ಶಿವಕುಮಾರ್ ಮಾತನಾಡುತ್ತ ಒಳ ಮೀಸಲಾತಿ ನಮ್ಮ ಹಕ್ಕು. ತಡ ಮಾಡದೆ ಜಾರಿಗೊಳಿಸಬೇಕು. ಇಲ್ಲವಾದಲ್ಲಿ ಬೀದಿಗಿಳಿದು ಉಗ್ರ ಹೋರಾಟ ನಡೆಸಬೇಕಾಗುತ್ತದೆ. ಮಾದಿಗರ ಪರವಾಗಿರುವುದಾಗಿ ಹೇಳಿಕೊಳ್ಳುತ್ತಿರುವ ಅಹಿಂದಾವರ್ಗದನಾಯಕರಾಜ್ಯದಮುಖ್ಯಮಂತ್ರಿಸಿದ್ದರಾಮಯ್ಯನವರು ಒಳ ಮೀಸಲಾತಿ ಜಾರಿಗೆ ತಂದು ಜಿಲ್ಲೆಗೆ ಕಾಲಿಡಬೇಕು. ಇಲ್ಲವಾದಲ್ಲಿ ವಿದ್ಯಾವಂತನಿಂದ ಹಿಡಿದು ಅನಕ್ಷರಸ್ಥರು ಎಲ್ಲಿ ಯಾವಾಗ ಘೇರಾವ್ ಹಾಕುತ್ತಾರೋ ಗೊತ್ತಿಲ್ಲ ಎಂದು ಸರ್ಕಾರವನ್ನು ಎಚ್ಚರಿಸಿದರು.

**ಪ್ರಮುಖ ಸುದ್ದಿ**

# ಒಳ ಮೀಸಲು ಜಾರಿಗೆ ಕಾಂಗ್ರೆಸ್ ಬದ್ಧ; ಆಂಜನೇಯ ಹೇಳಿಕೆ

» ಚಿತ್ರದುರ್ಗ

ರಾಜ್ಯ ಸರ್ಕಾರದ ಮುಂದೆ ಮಹತ್ವದಎರಡು ವರದಿಗಳಾದ ಸದಾಶಿವ ಮತ್ತುಕಾಂತರಾಜ್‌ಆಯೋಗದ ವರದಿ ಇದ್ದು, ಅದನ್ನು ಅನುಷ್ಠಾನಗೊಳಿಸುವ ಜವಾಬ್ದಾರಿ ಸಿಎಂ ಸಿದ್ದರಾಮಯ್ಯ ಅವರದ್ದಾಗಿದೆಎಂದು ಮಾಜಿ ಸಚಿವ ಎಚ್.ಆಂಜನೇಯ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಒಳಮೀಸಲು ಜಾರಿಗೆ ಕಾಂಗ್ರೆಸ್ ಪಕ್ಷ ಬದ್ಧವಾಗಿದ್ದು, ಈ ವಿಷಯದಲ್ಲಿ ಯಾವುದೇ ಅಪನಂಬಿಕೆ ಬೇಕಿಲ್ಲ.ಸ್ವತಃಮುಖ್ಯಮಂತ್ರಿಸಿದ್ದರಾಮಯ್ಯ ಹೆಚ್ಚು ಉತ್ಸಾಹಕರಾಗಿದ್ದಾರೆ. ಕೆಲ ಶಕ್ತಿಗಳು ಒಳಮೀಸಲು ಜಾರಿಗೆ ಅಡ್ಡಿಪಡಿಸುತ್ತಿದ್ದು, ಅದನ್ನು ಮೆಟ್ಟಿನಿಂತು ಜಾರಿಗೊಳಿಸುವ ಬದ್ಧತೆ ಸಿದ್ದರಾಮಯ್ಯ ಪ್ರದರ್ಶಿಸಲಿದ್ದಾರೆ ಎಂಬ ವಿಶ್ವಾಸ ಇದೆ ಎಂದು ತಿಳಿಸಿದರು.

ಪರಿಶಿಷ್ಟ ಜಾತಿಯಲ್ಲಿ ಪ್ರಬಲರ ಮಧ್ಯೆ ಪೈಪೋಟಿ ನಡೆಸಿ ಸೌಲಭ್ಯ ಪಡೆಯಲು ಮಾದಿಗ ಸಮುದಾಯಕ್ಕೆ ಸಾಧ್ಯವಾಗಿಲ್ಲ. ಜತೆಗೆ ಈಗಲೂ ನಿಕೃಷ್ಟ ಬದುಕು ನಡೆಸುತ್ತಿದೆ. ಈ ಕಾರಣಕ್ಕೆ ನಮ್ಮ ಪ್ರಗತಿಗಾಗಿ ಎಸ್.ಎಂ.ಕೃಷ್ಣ ಮುಖ್ಯಮಂತ್ರಿಯಾಗಿದ್ದ ಸಂದರ್ಭ ನ್ಯಾಯಮೂರ್ತಿ ಸದಾಶಿವ ಆಯೋಗ ರಚಿಸಲಾಗಿತ್ತು. ಬಳಿಕ ಎಲ್ಲ ಹಂತದಲ್ಲೂ ಒಳಮೀಸಲು ಜಾರಿ ಪರತನ್ನ ಬದ್ಧತೆಯನ್ನು ಕಾಂಗ್ರೆಸ್ ಪಕ್ಷ ಪ್ರದರ್ಶಿಸಿದೆ ಎಂದರು.

ವಿಧಾನಸಭಾ ಚುನಾವಣೆ ಮುನ್ನ ಚಿತ್ರದುರ್ಗದಲ್ಲಿ ನಡೆದ ಎಸ್ಸಿ–



ಎಸ್ಟಿ ಸಮಾವೇಶದಲ್ಲಿ ಹಾಗೂ ಪ್ರಣಾಳಿಕೆಯಲ್ಲೂ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದರೆ ಜಾರಿಗೊಳಿಸುವುದಾಗಿ ಹೇಳಿದೆ. ಆದರೆ, ಪಕ್ಷದ ನಡೆಗೆ ಅನೇಕ ಕಾನೂನು ತೊಡಕುಗಳು ಕೆಲಕಾಲ ಅಡ್ಡಿಯಾಗಿದ್ದವು. ಈಗ ಸುಪ್ರೀಂಕೋರ್ಟ್ ತೀರ್ಪು ಎಲ್ಲ ರೀತಿ ಸಮಸ್ಯೆಗಳಿಗೆ ತೆರೆ ಎಳೆದು, ಮಾದಿಗ ಸಮುದಾಯದ ಮನೆ ಬಾಗಿಲಿಗೆ ಸೌಭಾಗ್ಯವೇ ಬಂದು ನಿಂತಿದೆ. ಇನ್ನೂ ಕೆಲವೇ ತಿಂಗಳಲ್ಲಿ ಒಳಮೀಸಲು ಸೌಲಭ್ಯ ಅನುಭವಿಸುವ ಸುಸಂದರ್ಭ ಬರಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.ನ್ಯಾ.ಸದಾಶಿವ ಆಯೋಗದ ವಿಷಯದಲ್ಲಿ ವಿಳಂಬ ಆಗುತ್ತಿದೆ ಎಂಬ ಅಭಿಪ್ರಾಯ ಸಮುದಾಯದವರಲ್ಲಿ ಸಹಜವಾಗಿ ವ್ಯಕ್ತವಾಗಿದೆ. ಇದು ತಪ್ಪಲ್ಲ. ಆದರೆ ಈಗಾಗಲೇ ಕಾಂಗ್ರೆಸ್ ಪಕ್ಷದಲ್ಲಿನ ಎಲ್ಲ ದಲಿತ ನಾಯಕರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ವಿಷಯ ತಿಳಿಸಿದ್ದು, ಅವರು ಒಳಮೀಸಲು ಜಾರಿಗೊಳಿಸಿಯೇ ಸಿದ್ಧ. ಈ ವಿಷಯದಲ್ಲಿ ಸಂಶಯ ಬೇಡ ಎಂದು ತಿಳಿಸಿದ್ದಾರೆ ಎಂದರು.

ನಾವೆಲ್ಲರೂ ತಾಳ್ಮೆ ವಹಿಸಿದ್ದು ಜತೆಗೆ ಪದೇ ಪದೆ ಸಿಎಂ ಅವರನ್ನು ಭೇಟಿ ಮಾಡಿ ಒಳಮೀಸಲು ವಿಷಯ ಪ್ರಸ್ತಾಪಿಸುತ್ತಿದ್ದೇವೆ. ಇನ್ನೂ ಒಂದೆರಡು ತಿಂಗಳಲ್ಲಿ ಒಳಮೀಸಲಾತಿ ಜಾರಿಗೊಂಡು, ಅನುಷ್ಠಾನಕ್ಕೆ ಬರಲಿದೆ ಎಂಬ ವಿಶ್ವಾಸ ನಮಗಿದೆ. ಒಂದೊಮ್ಮೆ ಜಾರಿಗೊಳಿಸದಿದ್ದರೆ ನಾವೆಲ್ಲರೂ ಹೋರಾಟಕ್ಕೆ ಇಳಿಯುತ್ತೇವೆ. ಜತೆಗೆ ರಾಜ್ಯದಲ್ಲಿಯೇ ಎಂದೂ ನಡೆಯದಂತೆ ಚಳವಳಿ ನಡೆಸಲು ಸಿದ್ಧ. ಈ ಮಧ್ಯೆಯೂ ಈಗಾಗಲೇ ದಶಕಗಳಿಂದ ಹೋರಾಟ ನಡೆಸುತ್ತಿರುವ ದಲಿತ ಸಂಘಟನೆಗಳ ನೇತಾರರು, ನಿರಂತರ ಪ್ರತಿಭಟನೆ ಶಾಂತ ರೀತಿಯಲ್ಲಿ ನಡೆಸುವುದು ಅಗತ್ಯ. ಯಾವುದೇ ಕಾರಣಕ್ಕೆ ಬಂದ್, ರಸ್ತೆತಡೆ, ಜನಪ್ರತಿನಿಧಿಗಳಿಗೆ ಮುತ್ತಿಗೆ, ಘೇರಾವ್ ಹಾಕುವುದು ಸದ್ಯಕ್ಕೆ ಬೇಡ ಎಂದು ವಿನಂತಿ ಮಾಡಿಕೊಂಡರು.

ರಾಜ್ಯದ 224 ಶಾಸಕರ ಮನೆ ಮುಂದೆ ಧರಣಿ ನಡೆಸಿ, ಅವರಿಂದ ರಾಜ್ಯ ಸರ್ಕಾರಕ್ಕೆ ಒಳಮೀಸಲಾತಿ ಜಾರಿಗೊಳಿಸುವಂತೆ ಆಗ್ರಹಿಸಿ ಪತ್ರಗಳನ್ನು ಪಡೆದು, ಎಲ್ಲ ಪತ್ರಗಳನ್ನು ಒಟ್ಟುಗೂಡಿಸಿ ಮುಖ್ಯಮಂತ್ರಿ ಅವರಿಗೆ ಸಲ್ಲಿಸುವ ಮೂಲಕ ಒತ್ತಡ ಹಾಕುವ ಕೆಲಸ ಮಾಡಬೇಕು ಎಂದು ಅಭಿಪ್ರಾಯಪಟ್ಟರು.

ಮೀಸಲಾತಿಗೆಸದಾವಿರೋಧವಾಗಿರುವ ಬಿಜೆಪಿಗೆ ಇದ್ದಕ್ಕಿದ್ದಂತೆ ಒಳಮೀಸಲಾತಿ ನೆನಪು ಆಗಿರುವುದು ಆಶ್ಚರ್ಯ ಉಂಟು ಮಾಡಿದೆ. ಯಾವುದೇ ಪಕ್ಷ ರಾಜಕೀಯ ಲಾಭ ಪಡೆಯಲು ಅವಕಾಶ ಕಲ್ಪಿಸದೆ ಸಿದ್ದರಾಮಯ್ಯ ಗಟ್ಟಿ ನಿರ್ಧಾರ ಕೈಗೊಳ್ಳುತ್ತಾರೆ ಎಂದರು.

ತೆಲಂಗಾಣದಲ್ಲಿ ರೇವಂತ್‌ರೆಡ್ಡಿ ಆದೇಶಿಸಿರುವ ರೀತಿ ಎಲ್ಲ ರೀತಿಯ ಉದ್ಯೋಗಗಳ ನೇಮಕಾತಿಗೆ ತಡೆ ಹಾಕಲು ಮುಂದಾಗಬೇಕೆಂದು ಸಿಎಂ ಸಿದ್ದರಾಮಯ್ಯ ಅವರಲ್ಲಿ ಒತ್ತಾಯಿಸಿದ್ದು, ಈ ವಿಷಯದಲ್ಲಿ ಕಾಂಗ್ರೆಸ್ ಪಕ್ಷದಲ್ಲಿರುವ ದಲಿತ ರಾಜಕಾರಣಿಗಳು ಸಮುದಾಯದ ಹಿತಕ್ಕೆ ಬದ್ಧರಾಗಿದ್ದೇವೆ ಎಂದು ತಿಳಿಸಿದರು.

ಅ.15ರಂದು ಮತ್ತೊಮ್ಮೆ ಸಿಎಂ ಅವರನ್ನು ಭೇಟಿ ಮಾಡುತ್ತೇವೆ. ಅಗತ್ಯಬಿದ್ದರೆ ರಾಹುಲ್‌ಗಾಂಧಿ ಅವರನ್ನು ಭೇಟಿ ಮಾಡಿ ಒಳ ಮೀಸಲು ಜಾರಿಯಿಂದ ಸಮುದಾಯಕ್ಕೆ ಆಗುವ ಅನುಕೂಲ ಕುರಿತು ಮನದಟ್ಟು ಮಾಡುತ್ತೇವೆ. ಎಲ್ಲ ಯತ್ನಗಳು ವಿಫಲಗೊಂಡ ಬಳಿಕ ಬೀದಿಗಿಳಿದು ನಾವು ಹೋರಾಟಕ್ಕೆ ಸಿದ್ಧ ಎಂದರು.

ಜಾತಿಗಣತಿ ನಡೆಸಲು ಇಡೀ ದೇಶದಲ್ಲಿ ಮೊದಲಬಾರಿಗೆತೀರ್ಮಾನಕೈಗೊಂಡಿದ್ದು ರಾಜ್ಯದಲ್ಲಿನ ಕಾಂಗ್ರೆಸ್ ಸರ್ಕಾರ. ಈ ಹಿಂದೆ ನಾನು ಸಮಾಜಕಲ್ಯಾಣ ಸಚಿವನಾಗಿದ್ದ ಸಂದರ್ಭ ಕಾಂತರಾಜ್ ಆಯೋಗದ ಮಧ್ಯಂತರ ವರದಿ ಮಂಡಿಸಲು ಚಿಂತನೆ ನಡೆಸಿದ್ದೇ, ಆದರೆ, ಸಿಎಂ ಅವರು ಪೂರ್ಣ ಪ್ರಮಾಣದ ವರದಿ ಮಂಡಿಸಲು ಸಿದ್ಧತೆ ಮಾಡಿಕೊಳ್ಳುವಂತೆ ಸೂಚಿಸಿದ್ದರು. ಆದರೆ, ವೈಜ್ಞಾನಿಕ ವರದಿ ಸಿದ್ಧಪಡಿಸುವ ಕಾರಣಕ್ಕೆ ಆಯೋಗ ಈ ವಿಷಯದಲ್ಲಿ ನಮಗೆ ಸಲ್ಲಿಸಲಿಲ್ಲ. ಬಳಿಕ ನಮ್ಮ ಪಕ್ಷ ಸೋಲುಂಡಿತು. ಈಗ ವರದಿ ಸಿದ್ಧವಾಗಿದೆ. ಇದು ಮಂಡಿಸಿ ಅನುಷ್ಠಾನಗೊಳಿಸಿದರೆ ಎಲ್ಲ ರೀತಿಯ ಅನುಕೂಲ ನೊಂದ ಜನರಿಗೆ ಆಗಲಿದೆ. ಜತೆಗೆ ಸೌಲಭ್ಯ ಹಂಚಿಕೆ, ಮೀಸಲು ನಿಗದಿ ಸೇರಿ ವಿವಿಧ ರೀತಿ ಯೋಜನೆ ಕೈಗೊಳ್ಳಲು ಸಾಧ್ಯವಾಗಲಿದೆ ಎಂದರು.

ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್ ಮಾತನಾಡಿ, ಒಳ ಮೀಸಲು ಜಾರಿಗೆ ಪ್ರಕ್ರಿಯೆ ಆರಂಭಿಸಿದ್ದು ಕಾಂಗ್ರೆಸ್ ಪಕ್ಷ, ಅದನ್ನು ಅನುಷ್ಠಾನಗೊಳಿಸುವುದು ನಮ್ಮ ಪಕ್ಷವೇ ಎಂದು ಹೇಳಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಂ.ಕೆ. ತಾಜ್‌ಪೀರ್, ಜಿಪಂ ಮಾಜಿ ಸದಸ್ಯರಾದ ಬಿ.ಪಿ.ಪ್ರಕಾಶಮೂರ್ತಿ, ನರಸಿಂಹರಾಜು, ಮುಖಂಡರಾದ ಎಚ್.ಅಂಜಿನಪ್ಪ, ಎನ್.ಡಿ.ಕುಮಾರ್, ಡಿ.ಎನ್.ಮೈಲಾರಪ್ಪ, ಮುದಾಸೀರ, ರವಿಚಂದ್ರ ಇತರರಿದ್ದರು.

## ಫಾಸ್ಟ್ ನ್ಯೂಸ್

### ದಸರಾ ಹಿನ್ನೆಲೆ: ವಲಸೆಯಲ್ಲಿ ಶ್ರೀಮೈಲಾರಲಿಂಗೇಶ್ವರ ದೋಣಿ ಸೇವೆ ಕಾರ್ಯ



» **ಚಳ್ಳಕೆರೆ**

ದಸರಾ ಹಬ್ಬದ ಹಿನ್ನೆಲೆಯಲ್ಲಿ ಗ್ರಾಮೀಣ ಭಾಗಗಳಲ್ಲೂ ಸಹ ಗ್ರಾಮದ ದೇವಸ್ಥಾನದಲ್ಲಿ ಅನೇಕ ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳುವ ಮೂಲಕ ದಸರಾವನ್ನುನಾಡಹಬ್ಬವನ್ನಾಗಿಜನರೇಪರಿವರ್ತನೆ ಮಾಡುತ್ತಿದ್ದಾರೆ. ತಾಲ್ಲೂಕಿನ ತಳಕು ಹೋಬಳಿಯ ವಲಸೆಗ್ರಾಮದಲ್ಲಿ ದಸರಾ ಹಿನ್ನೆಲೆಯಲ್ಲಿ ಗ್ರಾಮದ ಭಕ್ತರು ಮೈಲಾರಲಿಂಗೇಶ್ವರಸ್ವಾಮಿಯ ದೋಣಿ ಸೇವೆಯನ್ನು ನಡೆಸುವ ಮೂಲಕ ದಸರಾದ ಮೆರಗನ್ನು ಹೆಚ್ಚಿಸಿದರು. ಈ ಬಗ್ಗೆ ಮಾಹಿತಿ ನೀಡಿದ ಗ್ರಾಮದಹಿರಿಯ ಮುಖಂಡ ರುದ್ರಪ್ಪ, ಪ್ರತಿವರ್ಷ ದಸರಾ ಸಂದರ್ಭದಲ್ಲಿ ಶ್ರೀಮೈಲಾರಲಿಂಗೇಶ್ವರಸ್ವಾಮಿಯ ಸೇವಾ ಸಮಿತಿ ಆಶ್ರಯದಲ್ಲಿ ದೋಣಿಸೇವೆ ಕಾರ್ಯಕ್ರಮವನ್ನು ಭಕ್ತಿಶ್ರದ್ದೆಯಿಂದ ನಡೆಸಲಾಗುತ್ತಿದೆ. ಇಡೀ ಗ್ರಾಮದಜನರು ಸ್ವಯಂ ಪ್ರೇರಣೆಯಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸುತ್ತಾರೆ. ತಾಲ್ಲೂಕಿನ ವಿವಿಧ ಭಾಗಗಳಿಂದ ಭಕ್ತರು ಮೈಲಾರಲಿಂಗೇಶ್ವರ ದೋಣಿಸೇವಾ ಕಾರ್ಯದಲ್ಲಿ ಪಾಲ್ಗೊಳ್ಳುವರು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಗ್ರಾಮದಮುಖಂಡರಾದ ಲಕ್ಷ್ಮಣ, ನಾಗರಾಜಪ್ಪ, ಕೆ.ಮಹಾಂತೇಶ್, ಡಿ.ವಿ.ಕಳಸಪ್ಪ, ಮುನಿಯಪ್ಪ, ಜಯಣ್ಣ, ಯಲ್ಲಪ್ಪ, ಶಿವಲಿಂಗಪ್ಪ, ತಿಪ್ಪೇಸ್ವಾಮಿ, ಬಂಗಾರಪ್ಪ, ಮಾರಣ್ಣ, ಎನ್.ಗುರುಮೂರ್ತಿ, ಕರಿಯಪ್ಪ,ಪರಮೇಶ್ವರಪ್ಪ,ರಾಜಣ್ಣಮುಂತಾದವರು ಪಾಲ್ಗೊಂಡಿದ್ದರು.

### ಶ್ರೀ ಕಾಳಿಕದೇವಿ ದೇವಸ್ಥಾನದಲ್ಲಿ ಮೇಳೈಸಿದ ದೇವಿ ಪಾರಾಯಣ

» **ಹೊಸದುರ್ಗ**

ದಸರಾ ಮಹೋತ್ಸವ ಅಂಗವಾಗಿ ಪಟ್ಟಣದ ಶ್ರೀ ಕಾಳಿಕದೇವಿ ದೇವಸ್ಥಾನದಲ್ಲಿ ತಾಲ್ಲೂಕು ವಿಶ್ವಕರ್ಮ ಮಹಿಳಾ ಅಭಿವೃದ್ಧಿ ಸಂಘದ ವತಿಯಿಂದ ಪ್ರತಿದಿನ ದೇವಿ ಪಾರಾಯಣ ಮತ್ತು ಭಜನೆ ಲಲಿತ ಸಹಸ್ರ ನಾಮ, ದುರ್ಗ ಕವಚ ನಾಮಸ್ಮರಣೆ ಮತ್ತಿತರೆ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಈ ಕಾರ್ಯಕ್ರಮದಲ್ಲಿ ಮಹಿಳಾ ಅಧ್ಯಕ್ಷೆ ಶ್ರೀಮತಿ ವಾಣಿ ತ್ಯಾಗರಾಜ್ ,ಕಾರ್ಯದರ್ಶಿ ಕಾಮಾಕ್ಷಿ ಹಾಗೂ ಖಜಾಂಚಿ ಶ್ಯಾಮಲ ಶ್ರೀಧರ್, ಶ್ರೀಮತಿ ಲಕ್ಷ್ಮಿ ದೇವಮ್ಮ, ಲತಾಮಂಜುನಾಥ್, ರಾಗಿ ಶ್ರೀಮತಿ ದಾಕ್ಷಾಯಿಣಿ , ವಿಶ್ವನಾಥಚಾರ್. ಹಾಗೂ ನಾಗರಾಜಚಾರ್ , ಪ್ರಸನ್ನಚಾರ್ ,ಶ್ರೀಮತಿ ಸುನಿತರಾಯ್ಕರ್, ಸೇರಿದಂತೆ ದೇವಿಯ ಆರಾಧಕರು ಭಾಗವಹಿಸಿದ್ದರು.

### ತಂತ್ರಜ್ಞಾನ ಬೆಳೆದು ಪತ್ರ ಬರೆಯುವವರ, ಓದುವವರ ಸಂಖ್ಯೆ ಕ್ಷೀಣಿಸಿದೆ




» **ಹೊಸದುರ್ಗ**

ಅಂಚೆ ಇಲಾಖೆಗೆ ತನ್ನದೆ ಆದ ಐತಿಹ್ಯವಿದೆ, ಪ್ರಸ್ತುತ ತಂತ್ರಜ್ಞಾನ ಬೆಳೆದು ಪತ್ರ ಬರೆಯುವವರ ಹಾಗೂ ಓದುವವರ ಸಂಖ್ಯೆ ಗಣನೀಯವಾಗಿ ಕ್ಷೀಣಿಸಿದೆ ಎಂದು ಅಂಚೆ ನಿರೀಕ್ಷಕ ಕಲ್ಲೇಶ್‌ಲಾಡ್ ಟಿ.ಎಲ್. ಅಸಮಾಧಾನ ವ್ಯಕ್ತಪಡಿಸಿದರು. ಪಟ್ಟಣದ ಮುಖ್ಯ ಅಂಚೆ ಕಛೇರಿಯ ಆವರಣದಲ್ಲಿ ರಾಷ್ಟ್ರೀಯ ಅಂಚೆ ಸಪ್ತಾಹದ ಅಂಗವಾಗಿ ಕಛೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ವಿಶ್ವ ಅಂಚೆ ದಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ತಂತ್ರಜ್ಞಾನ ಬದಲಾದಂತೆ ಅಂಚೆ ಇಲಾಖೆಯೂ ಸಹಾಬದಲಾಗಿದ್ದುಹಿಂದಿನಿಂದಗ್ರಾಹಕರಿಗೆಆರ್ಥಿಕ ಸೇವೆಯ ಜೊತೆಗೆ ಸಂಪರ್ಕ ಸೇತುವೆಯಾಗಿಯೂ ಸಹಾ ಕಾರ್ಯನಿರ್ವಹಿಸುತ್ತಿದೆ ಎಂದರು.
ಅಂಚೆ ಇಲಾಖೆ ಈಗ ಕೇವಲ ಪತ್ರ ಸಾಗಾಟಕ್ಕೆ ಸೀಮಿತವಾಗಿಲ್ಲಸಣ್ಣಉಳಿತಾಯದಿಂದಹಿಡಿದು,ಸ್ಥಿರ ಠೇವಣಿಯನ್ನು ಪಡೆದುಕೊಳ್ಳುತ್ತಿದೆ,ಅಲ್ಲದೆ ಸಾಲ ಸೌಲಭ್ಯವನ್ನು ನೀಡುವ ಮೂಲಕ ಬ್ಯಾಂಕಿಂಗ್ ಸೇವೆಯನ್ನು ಒದಗಿಸುತ್ತಿದೆ ಎಂದರು.

**ವಿಶ್ವ ದೃಷ್ಟಿ ದಿನದ ಕಾರ್ಯಕ್ರಮದಲ್ಲಿ ಹಿರಿಯ ನೇತ್ರ ತಜ್ಞೆ ಡಾ.ಐ.ಎಂ.ಶಿಲ್ಪಾ**

# ಕಣ್ಣಿನ ದೃಷ್ಟಿಯ ಬಗ್ಗೆ ಜಾಗೃತಿ ವಹಿಸಿ

» **ಚಿತ್ರದುರ್ಗ**

ಜೀವನದಲ್ಲಿ ದೃಷ್ಟಿ ಬಹು ಮುಖ್ಯ. ಯಾವುದೇ ಒಂದು ವಸ್ತು, ಬಣ್ಣ, ಸನ್ನಿವೇಶ ಅರ್ಥ ಮಾಡಿಕೊಳ್ಳಬೇಕಾದರೆ ದೃಷ್ಟಿ ಬೇಕೇ ಬೇಕು. ನಾವೆಲ್ಲರೂ ಕಣ್ಣಿನ ದೃಷ್ಟಿ ಕಾಪಾಡಿಕೊಳ್ಳುವಬಗ್ಗೆಜಾಗೃತೆವಹಿಸಬೇಕು ಎಂದು ಜಿಲ್ಲಾಸ್ಪತ್ರೆ ಹಿರಿಯ ನೇತ್ರ ತಜ್ಞೆ ಡಾ.ಐ.ಎಂ.ಶಿಲ್ಪಾ ಹೇಳಿದರು.

ನಗರದ ಜಿಲ್ಲಾಸ್ಪತ್ರೆಯ ಅಧೀನದ ಸರ್ಕಾರಿ ಬಿ.ಎಸ್ಸಿ ನರ್ಸಿಂಗ್ ಕಾಲೇಜಿನಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ದೃಷ್ಟಿ ದಿನದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಹುಟ್ಟಿದ ಮಕ್ಕಳಲ್ಲಿ ಅನೇಕ ಕಾರಣಗಳಿಂದ ಹುಟ್ಟು ಕುರುಡು ಉಂಟಾಗುವ ಸಾಧ್ಯತೆಗಳು ಇರುತ್ತವೆ. ಯಾವುದೇ ನ್ಯೂನತೆಗಳನ್ನು ಹುಟ್ಟಿದ ಹನ್ನೆರೆಡು ವರ್ಷಗಳಲ್ಲಿ ಬಹಳಷ್ಟು ತೊಂದರೆಗಳನ್ನುಸೂಕ್ತಚಿಕಿತ್ಸೆನೀಡುವುದರ ಮುಖಾಂತರ ಸರಿಪಡಿಸಬಹುದಾಗಿದೆ. ಯಾವುದೇ ಮಗು ದೃಷ್ಟಿಗೆ ಸಂಬಂಧಿಸಿದ ತೊಂದರೆ ಇರುವುದು ಕಂಡುಬಂದಲ್ಲಿ ಹತ್ತಿರದ ತಜ್ಞ ವೈದ್ಯರಿಗೆ ತೋರಿಸಿ ಚಿಕಿತ್ಸೆ ಕೊಡಿಸಿದರೆ ಗುಣವಾಗುವುದರಲ್ಲಿ ಸಂದೇಹವಿಲ್ಲ ಎಂದು ತಿಳಿಸಿದ ಅವರು, ಮೊಬೈಲ್ ವೀಕ್ಷಣೆ ಮಕ್ಕಳಿಗೆ ಅತಿಯಾದ ಅಭ್ಯಾಸ ಮಾಡಿಸುತ್ತಿದ್ದಾರೆ ಅದು ಕಡಿಮೆಯಾಗಬೇಕು ಎಂದು ಸಲಹೆ ನೀಡಿದರು. ನೇತ್ರತಜ್ಞರಾದ ಡಾ.ಪ್ರದೀಪ್ ಮಾತನಾಡಿ, ವಿಟಮಿನ್ "ಎ" ಅನ್ನಾಂಗ ಹೆಚ್ಚಾಗಿರುವ ಹಣ್ಣುಗಳು ತರಕಾರಿಗಳನ್ನು ಸೇವಿಸಿ ಕಣ್ಣಿನ ದೃಷ್ಟಿ ಚೆನ್ನಾಗಿಟ್ಟುಕೊಳ್ಳಬಹುದು. ಆದ್ದರಿಂದ ಉತ್ತಮ ಆರೈಕೆ ಮಾಡಿ ಎಲ್ಲೆಂದರಲ್ಲಿ ಸಿಗುವ ಔಷಧಿಗಳನ್ನು ಬಳಸದೆ ನಿಗದಿತ ಔಷಧಿ ಅಂಗಡಿಗಳಲ್ಲಿ ಸಿಗುವ ಔಷಧಿಗಳನ್ನು ಉಪಯೋಗಿದುವುದರಿಂದ ಕಣ್ಣಿಗೆ ಅಡ್ಡ ಪರಿಣಾಮಗಳು ಉಂಟಾಗಿ ದೃಷ್ಟಿಗೆ ಸಮಸ್ಯೆ ಆಗಬಹುದು ಆದ್ದರಿಂದ ಜಾಹೀರಾತು ನೀಡುವ ವಸ್ತುಗಳನ್ನು ಬಳಸಿ ದೃಷ್ಟಿ ಹಾಳು ಮಾಡಿಕೊಳ್ಳಬೇಡಿ ಎಂದು ತಿಳಿಸಿದರು. ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿ ಡಾ.ನಾಗರಾಜ್, ಜಿಲ್ಲಾ ಸರ್ಕಾರಿ ನರ್ಸಿಂಗ್ ಕಾಲೇಜಿನ ಪ್ರಾಂಶುಪಾಲರಾದಅನುಸೂಯಮ್ಮ,ನಗರ ಆರೋಗ್ಯ ಕೇಂದ್ರದ ಹಿರಿಯ ಆರೋಗ್ಯ ನರೀಕ್ಷಣಾಧಿಕಾರಿ ಟಿ.ಶ್ರೀನಿವಾಸಮೂರ್ತಿ, ನೇತ್ರಾಧಿಕಾರಿ ಕೆ.ಸಿ.ರಾಮು, ಜಿಲ್ಲಾ ಮಾನಸಿಕ ರೋಗ ವಿಭಾಗದ ಕನ್ಸಲ್ಟೆಂಟ್ ಶ್ರೀಧರ್, ಜಿಲ್ಲಾ ಬ್ರೈನ್ ಹೆಲ್ತ್ ಕನ್ಸಲ್ಟೆಂಟ್ ಶರತ್ ಹಾಗೂ ನರ್ಸಿಂಗ್ ಕಾಲೇಜಿನ ಬೋಧಕ ವರ್ಗದವರು ವಿದ್ಯಾರ್ಥಿಗಳು ಹಾಜರಿದ್ದರು.




# ಧರ್ಮದ ಹೆಸರಿನಲ್ಲಿ ಪ್ರಾಣಿ ಬಲಿಕೊಡುವುದನ್ನು ಬುದ್ದ ಕಟುವಾಗಿ ವಿರೋಧಿಸಿದ್ದರು: ಮಹೇಶ್

» **ಚಿತ್ರದುರ್ಗ**

ದೇವರು, ಧರ್ಮದ ಹೆಸರಿನಲ್ಲಿ ಪ್ರಾಣಿಗಳನ್ನು ಬಲಿಕೊಡುವುದನ್ನು ಬುದ್ದ ಕಟುವಾಗಿ ವಿರೋಧಿಸಿದ್ದರು ಎಂದು ಪ್ರೊ.ಸಿ.ಕೆ.ಮಹೇಶ್ ಹೇಳಿದರು.

ಅಂಬೇಡ್ಕರ್–ನವಯಾನ ಬುದ್ಧ ಧಮ್ಮ ಸಂಘದಿಂದ ಅಂಬೇಡ್ಕರ್ ಪ್ರತಿಮೆ ಹತ್ತಿರ ಸೋಮವಾರ ನಡೆದ ಧಮ್ಮ ದೀಕ್ಷೋತ್ಸವದಲ್ಲಿ ಭಾಗವಹಿಸಿ ಮಾತನಾಡಿದರು.

ಶ್ರೀಮಂತ–ಬಡವ ಎನ್ನುವ ವ್ಯತ್ಯಾಸದಿಂದ ಹಿಂಸೆ ಹುಟ್ಟುತ್ತದೆಯೆಂದು ಬುದ್ದ ವಿಶ್ವಕ್ಕೆ ಸಂದೇಶ ಸಾರಿದ. ಬುದ್ದನ ಆಲೋಚನೆಯನ್ನು ಪಲ್ಲವರು, ಅಶೋಕರು ತಿಳಿದುಕೊಂಡು ಹಿಂಸೆಯನ್ನು ವಿರೋಧಿಸುತ್ತಿದ್ದರು. ಅದಕ್ಕಾಗಿ ಬುದ್ದ ಧಮ್ಮವನ್ನು ಪ್ರತಿಯೊಬ್ಬರು ಪಾಲಿಸಿದರೆ ಹಿಂಸೆ ತೊಲಗುತ್ತದೆ. ರಕ್ತದ ಮಡುವಿನಲ್ಲಿ ಒದ್ದಾಡುವ ಸ್ಥಿತಿ ಬಂದಿದೆ. ಜ್ಯೋತಿಷಿ, ಭವಿಷ್ಯವನ್ನು ಹೇಳಿ ಅಮಾಯಕರನ್ನು ವಂಚಿಸುತ್ತಿದ್ದುದವನ್ನು ಬುದ್ದ ಒಪ್ಪುತ್ತಿರಲಿಲ್ಲ ಎಂದು ತಿಳಿಸಿದರು.

ಧರ್ಮ ದೇವರ ನೆಪದಲ್ಲಿ ಕುಣಿದು ಕುಪ್ಪಳಿಸುವವರ ಸಂಖ್ಯೆ ಜಾಸ್ತಿಯಾಗಿದೆ. ಕುಡಿತದಿಂದ ಕುಟುಂಬ ಹಾಳಾಗುತ್ತದೆ. ಅದಕ್ಕಾಗಿ ಬುದ್ದನ ವಿಚಾರಗಳನ್ನು ಒಪ್ಪುವವರು ಮೊದಲು ಕುಡಿತ ತ್ಯಜಿಸಬೇಕು. ಹಾಗಾಗಿ ಬುದ್ದ ಎಲ್ಲಾ ಕಾಲಕ್ಕೂ ಪ್ರಸ್ತುತ. ಯಜ್ಞ, ಯಾಗಾದಿ, ಹವನ, ಹೋಮಗಳನ್ನು ಬುದ್ದ ಸದಾ ವಿರೋಧಿಸುತ್ತಿದ್ದರು. ಕುಡಿತ ತಪ್ಪಿಸಿದರೆ ಮನೆ ಕುಟುಂಬ ಉಳಿಯುತ್ತದೆ ಎನ್ನುವುದು ಬುದ್ದನ ಚಿಂತನೆಯಾಗಿತ್ತು ಎಂದರು.

ಸುಳ್ಳು, ಹಿಂಸೆ, ಕುಡಿತ, ವ್ಯಭಿಚಾರದಿಂದ ನೈತಿಕ ಹಾಗೂ ಬೌತಿಕವಾಗಿ ಮನುಷ್ಯ ದಿವಾಳಿಯಾಗುತ್ತಾನೆ. ಬುದ್ದ ಧರ್ಮದ ಬೆಳವಣಿಗೆಯಂದರೆ ಅದು ದೇಶದ ಅಭಿವೃದ್ದಿಯಿದ್ದಂತೆ. ಮನಸ್ಸು ಮತ್ತು ಮನೆಗಳಲ್ಲಿ ಬುದ್ದ ಧಮ್ಮದ ಆಲೋಚನೆಯಿಟ್ಟುಕೊಳ್ಳಬೇಕು. ವಿಶ್ವಾದ್ಯಂತ ಬುದ್ದನ ಮರುಹುಟ್ಟು ಪಡೆದುಕೊಳ್ಳುತ್ತಿದೆ. ಬುದ್ದ ಧಮ್ಮವನ್ನು ಎದೆಗಿಟ್ಟುಕೊಂಡು ಬದುಕುವವರ ಸಂಖ್ಯೆ ಜಾಸ್ತಿಯಾಗುತ್ತಿದೆ ಎಂದು ನುಡಿದರು.

ನಿವೃತ್ತ ಉಪ ವಿಭಾಗಾಧಿಕಾರಿ ಮಲ್ಲಿಕಾರ್ಜುನ್ ಹಿರೇಹಳ್ಳಿ ಮಾತನಾಡಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರು ಹಿಂದೂ ಧರ್ಮವನ್ನುತೊರೆದುಬುದ್ದಧರ್ಮಕ್ಕೆಹೋದರು. ಅಂತಹ ವಾತಾವರಣ ಸೃಷ್ಟಿಯಾಗಬೇಕಾದರೆ ಪ್ರತಿ ಮನೆ ಮನೆಗೆ ಬುದ್ದನ ವಿಚಾರಗಳು ತಲುಪಬೇಕು ಎಂದು ತಿಳಿಸಿದರು. ನಗರಸಭೆ ಅಧ್ಯಕ್ಷೆ ಸುಮಿತ ರಾಘವೇಂದ್ರ, ಡಿ.ದುರುಗೇಶಪ್ಪ, ಚಿಕ್ಕಣ್ಣ, ರಾಮುಗೋಸಾಯಿ, ದಲಿತ ಮುಖಂಡ ಬಿ.ರಾಜಣ್ಣ, ಪಿ.ವೈ.ದೇವರಾಜ್‌ಪ್ರಸಾದ್, ಟಿ.ರಾಮುನಿವೃತ್ತ ಡಿ.ಡಿ.ಪಿ.ಐ. ರುದ್ರಪ್ಪ, ಲೇಖಕ ಹೆಚ್.ಆನಂದ್‌ಕುಮಾರ್, ಸಿದ್ದೇಶಿ ಇನ್ನು ಅನೇಕರು ಧಮ್ಮ ದೀಕ್ಷೋತ್ಸವದಲ್ಲಿ ಪಾಲ್ಗೊಂಡಿದ್ದರು.




## ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಗೆ ರೈತ ಸಂಘ ಖಂಡನೆ



» **ಚಿತ್ರದುರ್ಗ**

ರೈತರ ಬೆಳೆಗಳಿಗೆ ವೈಜ್ಞಾನಿಕ ಬೆಲೆ ಕೊಡದೆ ಕಾಲ ಹರಣ ಮಾಡುತ್ತಿರುವ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿ ಅಖಂಡ ಕರ್ನಾಟಕ ರೈತ ಸಂಘದಿಂದ ಪ್ರವಾಸಿ ಮಂದಿರದಲ್ಲಿ ಸೋಮವಾರ ಸಭೆ ನಡೆಸಲಾಯಿತು. ಅಖಂಡ ಕರ್ನಾಟಕ ರೈತ ಸಂಘದ ರಾಜ್ಯಾಧ್ಯಕ್ಷ ಸೋಮಗುದ್ದುರಂಗಸ್ವಾಮಿ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಮೂಡಾ, ವಾಲ್ಮೀಕಿ ಹಗರಣದಲ್ಲಿ ಸಿಲುಕಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಕುರ್ಚಿ ಉಳಿಸಿಕೊಳ್ಳಲು ಕಸರತ್ತು ನಡೆಸುತ್ತಿದ್ದಾರೆ. ವಿರೋಧ ಪಕ್ಷಗಳು ಆರೋಪದಲ್ಲಿ ಮುಳುಗಿವೆಯೇ ವಿನಃ ಅಭಿವೃದ್ದಿ ಕುರಿತು ಚರ್ಚಿಸುತ್ತಿಲ್ಲ. ಅತಿವೃಷ್ಟಿ, ಅನಾವೃಷ್ಟಿ ಎರಡರಲ್ಲೂ ರೈತರು ನಷ್ಟ ಅನುಭವಿಸುತ್ತಿದ್ದಾರೆ. ರೈತರು ಜಮೀನುಗಳಿಗೆ ಓಡಾಡಲು ರಸ್ತೆ, ಬಂಡಿ ಜಾಡಿಗಾಗಿ ಒತ್ತಾಯಿಸುತ್ತಲೆ ಬರುತ್ತಿದ್ದೇವೆ. ಅಧಿಕಾರಿಗಳು ರೈತರನ್ನು ಕಡೆಗಣಿಸುತ್ತಿದ್ದಾರೆ. ಬೀಜ, ಗೊಬ್ಬರ, ಕ್ರಿಮಿನಾಶಕಗಳ ಬೆಲೆ ದುಬಾರಿಯಾಗಿದೆ. ಹನಿ ನೀರಾವರಿ ಪೈಪ್‌ಗಳು ಕಳಪೆ ಮಟ್ಟದಿಂದ ಕೂಡಿದೆ. ಹಾಲಿನ ದರ ಕಡಿಮೆಗೊಳಿಸಿ ಹೈನುಗಾರಿಕೆಯಲ್ಲಿ ತೊಡಗಿರುವ ರೈತನಿಗೆ ಸರ್ಕಾರ ಬರೆ ಎಳೆಯುತ್ತಿದೆ. ಪಂಪ್‌ಸೆಟ್‌ಗಳಿಗೆ ಆಧಾರ್ ಜೋಡಣೆ ನಿಲ್ಲಿಸಬೇಕು. ಜಿಲ್ಲಾಧಿಕಾರಿಗಳು ತಕ್ಷಣವೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳ ಸಭೆ ನಡೆಸಿ ರೈತರ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕೆಂದು ಸೋಮಗುದ್ದು ರಂಗಸ್ವಾಮಿ ಸಭೆಯಲ್ಲಿ ಒತ್ತಾಯಿಸಿದರು. ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾಧ್ಯಕ್ಷ ಎಲ್.ಬಸವರಾಜಪ್ಪ ಅಳಗವಾಡಿ, ಕುರುಬರಹಳ್ಳಿ ಶಿವಣ್ಣ, ಬಸ್ತಿಹಳ್ಳಿ ನಾರಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಸಿದ್ದಪ್ಪ ಹಳಿಯೂರು, ಎಸ್.ಎಂ.ಶಿವಕುಮಾರ್, ಮಹಮದ್ ಸೈಫುಲ್ಲಾ, ಹಿರಿಯೂರು ತಾಲ್ಲೂಕು ಅಧ್ಯಕ್ಷ ಪುಟ್ಟಲಿಂಗಪ್ಪ, ಚಳ್ಳಕೆರೆ ತಾಲ್ಲೂಕು ಅಧ್ಯಕ್ಷ ಗಿರೀಶ್‌ರೆಡ್ಡಿ, ಪರಮೇಶ್ವರಪ್ಪ ಇನ್ನು ಮುಂತಾದವರು ಸಭೆಯಲ್ಲಿ ಹಾಜರಿದ್ದರು.



**ಚಳ್ಳಕೆರೆತಾಲ್ಲೂಕಿನ ವಲಸೆಗ್ರಾಮದಲ್ಲಿ ದಸರಾ ಹಿನ್ನೆಲೆಯಲ್ಲಿ ಗ್ರಾಮದ ಭಕ್ತರು ಮೈಲಾರಲಿಂಗೇಶ್ವರ ಸ್ವಾಮಿಯ ದೋಣಿ ಸೇವೆಗೆ ಸಿದ್ದರಾದ ಗೊರವಯ್ಯರು.**




**ರಾಜ್ಯ ತಂಡಕ್ಕೆ ಕರ್ನಾಟಕ ಟೆನ್ನಿಸ್ ಬಾಲ್ ಕ್ರಿಕೆಟ್ ಅಸೋಸಿಯೇಷನ್ ಬೆಂಗಳೂರು ವತಿಯಿಂದ ಎಲ್ಲಾ ಆಟಗಾರರಿಗೂ ಅಭಿನಂದನೆ ಸಲ್ಲಿಸಲಾಯಿತು.**

## ಪ್ರಮುಖ ಸುದ್ದಿ

**ಬಾರ್ ತೆರವಿಗೆ ಗ್ರಾಮಸ್ಥರ ಒಕ್ಕೊರಲ ಮನವಿ**

# ಗೌರಸಮುದ್ರ ಗ್ರಾಮದ ಬಾರನ್ನು ಬಂದ್ ಮಾಡಿ ಪ್ರತಿಭಟನೆ

» **ಚಳ್ಳಕೆರೆ**

ಗ್ರಾಮದಲ್ಲಿರುವ ಬಾರನ್ನು ಮುಚ್ಚುವಂತೆ ಒತ್ತಾಯಿಸಿ ಬಾರ್‌ಗೆ ಬೀಗಜಡಿದು ಪ್ರತಿಭಟನೆ ನಡೆಸಿ ಗ್ರಾಮಸ್ಥರು.

ತಾಲ್ಲೂಕಿನ ತಳಕು ಹೋಬಳಿಯ ಗೌರಸಮುದ್ರ ಗ್ರಾಮದಲ್ಲಿ ಖಾಸಗಿ ಬಾರೊಂದು ಕಳೆದ ಕೆಲವು ವರ್ಷಗಳಿಂದ ಗ್ರಾಮದಲ್ಲಿ ಮಧ್ಯ ಮಾರಾಟ ಮಾಡುತ್ತಿದ್ದು, ಇದರಿಂದಮಹಿಳೆಯರು ಹಾಗೂ ಮಕ್ಕಳು, ಯುವಕರಿಗೆ ತೊಂದರೆಯಾಗುತ್ತಿದೆ. ಪ್ರತಿನಿತ್ಯ ಕುಡಿದವರು ದಾರಿಯುದ್ದಕ್ಕೂ ಅವಾಚ್ಯಶಬ್ದಗಳಿಂದ ನಿಂದಿಸುತ್ತಾರೆ, ಗ್ರಾಮದಲ್ಲಿ ಅಶಾಂತಿ ವಾತಾವರಣ ನಿರ್ಮಾಣಕ್ಕೆ ಮದ್ಯಮಾರಾಟವೇ ಕಾರಣವಾಗುತ್ತಿದೆ ಎಂದು ಆರೋಪಿಸಿ ಗ್ರಾಮದ ತಿರುಮಲ ಬಾರ್‌ಗೆ ಬೀಗ ಜಡಿದು ಗ್ರಾಮಸ್ಥರು ಪ್ರತಿಭಟನೆ ನಡೆಸಿದರು. ಗ್ರಾಮ ಪಂಚಾಯಿತಿ ಸದಸ್ಯ ಶಶಿಧರ, ಬಾರ್‌ನಿಂದಗ್ರಾಮದಲ್ಲಿ ಅಶಾಂತಿ ವಾತಾವರಣ ಉಂಟಾಗಿದೆ. ವಿಶೇಷವಾಗಿ ಮಹಿಳೆಯರು ರಸ್ತೆಯಲ್ಲಿ ಓಡಾಡುವುದೇ ಕಷ್ಟವಾಗಿದೆ. ಬೆಳಗಿನಿಂದ ಸಂಜೆವರೆಗೂ ಕುಡಿದುಬಂದವರು ದಾರಿಯುದ್ದಕ್ಕೂ ಮನಸೋಇಚ್ಚೆ ಎಲ್ಲರನ್ನೂ ಬೈಯುತ್ತಿದ್ದಾರೆ, ಬಾಯಿಗೆ ಲಗಾಮ್‌ಇಲ್ಲದೆ ಮನಬಂದಂತೆಮಾತ 'ನಾಡುತ್ತಿದ್ದಾರೆ. ವಿಶೇಷವಾಗಿ ಶಾಲೆಯ ವಿದ್ಯಾರ್ಥಿಗಳೂ ಸಹ ಈಗ ಕುಡಿತದ ಮೋಜಿಗೆ ಸಿಲುಕಿದ್ದಾರೆ. ಗ್ರಾಮದಲ್ಲಿ ಬಾರ್‌ನಿಂದ ಸೌಹಾರ್ಧಿತ ವಾತಾವರಣ ಮಾಯವಾಗಿದೆ. ಆದ್ದರಿಂದಕೂಡಲೇ ಬಾರನ್ನು ಬೇರೆಗೆ ಸ್ಥಳಾಂತರ ಮಾಡಬೇಕೆಂದು ಒತ್ತಾಯಿಸಿ ಪ್ರತಿಭಟನೆ ನಡೆಸಲಾಯಿತು.

ಗ್ರಾಮ ಪಂಚಾಯಿತಿ ಸದಸ್ಯರಾದ ಈರಣ್ಣ, ನಾಗರಾಜು, ಗ್ರಾಮಸ್ಥರಾದ ಭಾಗ್ಯಮ್ಮ, ಮಾರಕ್ಕ, ನಾಗರಾಜ, ರಾಜಶೇಖರ, ಚಂದ್ರಶೇಖರ, ಪಾಲಕ್ಕ, ಉಷಾ, ಸುಧಾ, ಗಂಗಮ್ಮ, ಗೌರಮ್ಮ, ಮುರುಳಿ, ನಾಗರಾಜು ಮುಂತಾದವರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.



Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T